MAG(2) PRB/CR/70/2022-23 REG NO: KARKAN27951

# ಮುಂಜಾನೆ ವಾರ್ತೆ

MUNJANE VARTHE

ಇ-ಪೇಪರ್: www.munjaneevartheepaper.com

EDITOR: H.L.AMARANATH

ಸಂಪಾದಕ: ಹೆಚ್.ಎಲ್ ಅಮರನಾಥ್

ಕನ್ನಡ ದಿನಪತ್ರಿಕೆ

ಜಾಹೀರಾತಿಗಾಗಿ ಸಂಪರ್ಕಿಸಿ 9663122276

website: munjanevarthe.com

Volume: 02 Issue: 96 | ಸಂಪುಟ: 02 | ಸಂಚಿಕೆ: 96 | ಪುಟಗಳು: 04 | munjanevarthe | 20 MONDAY MAY 2024 | 20 ಸೋಮವಾರ ಮೇ 2024 | ₹ 2

**ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ ಹಿನ್ನೆಲೆ ಜಿಲ್ಲಾಧಿಕಾರಿಗಳಿಂದ ನಿಷೇಧಾಜ್ಞೆ** ವಿವರಪುಟ 02

**ಸರ್ಕಾರಿ ಶಾಲೆಗಳಲ್ಲಿ ಉತ್ತಮ ಶಿಕ್ಷಣವಿದ್ದರೂ ಖಾಸಗಿ ವ್ಯಾಮೋಹ** ವಿವರಪುಟ 03

**ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ ಹಿನ್ನೆಲೆ ಜಿಲ್ಲಾಧಿಕಾರಿಗಳಿಂದ ನಿಷೇಧಾಜ್ಞೆ** ವಿವರಪುಟ 04

# ಅಬ್ಬರಿಸಿದ ವರುಣ....

ಬೆಂಗಳೂರು: ರಾಜಧಾನಿಯಲ್ಲಿ ಇಂದು ಧಾರಾಕಾರ ಮಳೆ ಸುರಿಯುತ್ತಿದೆ. ಬೆಳಗ್ಗೆಯಿಂದಲೂ ಬಿಟ್ಟು ಬಿಡದೇ ಮಳೆಯಾಗುತ್ತಿದೆ.

ವಿಧಾನಸೌಧ, ಕೆ.ಆರ್. ಮಾರ್ಕೆಟ್, ಮೆಜೆಸ್ಟಿಕ್, ಮಲ್ಲೇಶ್ವರ, ಯಶವಂತಪುರ, ಮತ್ತಿಕೆರೆ, ಗೊರುಗುಂಟೆಪಾಳ್ಯ ಸುತ್ತಮುತ್ತ ಮಳೆಯಾಗುತ್ತಿದೆ.

ಮೆಜೆಸ್ಟಿಕ್, ಕೆ.ಆರ್. ಮಾರ್ಕೆಟ್, ಗಾಂಧಿನಗರ, ಟೌನ್‌ಹಾಲ್, ಕೆ.ಜಿ. ರೋಡ್ ಸೇರಿದಂತೆ ಹಲವೆಡೆ ಮಳೆಯ ಅಬ್ಬರ ಜೋರಾಗಿದೆ. ಮುಂಗಾರು ಪೂರ್ವ ಮಳೆಯಿಂದಾಗಿ ಬೆಂಗಳೂರು ಕೂಲ್ ಕೂಲ್ ಎನಿಸಿದೆ.

ನಗರದ ಹಲವು ಭಾಗಗಳಲ್ಲಿ ಬೆಳಗ್ಗೆಯಿಂದ ಮೋಡ ಕವಿದ ವಾತಾವರಣ ಇತ್ತು. ಕೆಲವು ಕಡೆ ಹನಿ ಮಳೆಯಾಗುತ್ತಿತ್ತು. ಆದರೆ ಸಾಯಂಕಾಲ ಆಗುತ್ತಿದ್ದಂತೆ ಮಳೆ ಅಬ್ಬರ ಜೋರಾಯಿತು. ಇದರಿಂದ ವಾಹನ ಸವಾರರು ಪರದಾಡುವಂತಾಯಿತು.

ಕಸ್ತೂರಿ ನಗರ ಕಡೆಯಿಂದ ಕಡೆಗೆ ಹೋಗುವ ಮಾರ್ಗದಲ್ಲಿ ಎಂ. ಎಂ. ಟಿ ಬಸ್ ನಿಲ್ದಾಣದ ಹತ್ತಿರ ಮಳೆ ನೀರು ನಿಂತಿರುವುದರಿಂದ ವೈಟ್‌ಫೀಲ್ಡ್, ಮಹದೇವಪುರ ಮತ್ತು ಕೆ ಆರ್ ಪುರ ಕಡೆಗೆ ಹೋಗುವ ವಾಹನಗಳ ಸಂಚಾರ ನಿಧಾನಗತಿಯಲ್ಲಿರುತ್ತದೆ.

ಕಸ್ತೂರಿ ನಗರ ಕಡೆಯಿಂದ ಎಂಎಂಟಿ ಜಂಕ್ಷನ್ (ಕೆ.ಆರ್.ಪುರ) ಕಡೆಗೆ ಹೋಗುವ ಮಾರ್ಗದಲ್ಲಿ ಎಂಎಂಟಿ ಬಸ್ ನಿಲ್ದಾಣದ ಹತ್ತಿರ ಮಳೆ ನೀರು ನಿಂತಿರುವುದರಿಂದ ವೈಟ್‌ಫೀಲ್ಡ್, ಮಹದೇವಪುರ ಮತ್ತು ಕೆ.ಆರ್. ಪುರ ಕಡೆಗೆ ಹೋಗುವ ವಾಹನಗಳ ಸಂಚಾರ ನಿಧಾನಗತಿಯಲ್ಲಿರುತ್ತದೆ. ಇದನ್ನು ಶೀಘ್ರವೇ ತೆರವುಗೊಳಿಸಲಾಗುತ್ತಿದ್ದು, ಸಹಕರಿಸಲು ಜನರಲ್ಲಿ ಪೊಲೀಸರು ಮನವಿ ಮಾಡಿದ್ದಾರೆ.

ನೆಲಮಂಗಲ ಸುತ್ತಮುತ್ತ ಜೋರು ಮಳೆಯಾಗಿದೆ. ಗುಡುಗು-ಬಿರುಗಾಳಿ ಸಹಿತ ಮಳೆಯಾಗುತ್ತಿದ್ದು, ವಾಹನ ಸವಾರರು ಪರದಾಡಿದ್ದಾರೆ. ನೆಲಮಂಗಲ ತಾಲೂಕಿನ ಮೇಳೇಕತ್ತಿಗನೂರು ಗ್ರಾಮದಲ್ಲಿ ಸಿಡಿಲಿಗೆ ರೈತ ಬಲಿಯಾಗಿದ್ದಾನೆ.

ಯಲಹಂಕ, ನ್ಯೂ ಟೌನ್, ದೊಡ್ಡಬಳ್ಳಾಪುರ ಮುಖ್ಯರಸ್ತೆ, ಪುಟ್ಟೇನಹಳ್ಳಿ, ಏರ್ಪೋರ್ಟ್ ರೋಡ್, ಅನಂತಪುರ ಭಾಗದಲ್ಲಿ ಜೋರು ಮಳೆಯಾಗಿದೆ. ಸದ್ಯ ನಗರದಲ್ಲಿ ಮುಂದಿನ ನಾಲ್ಕು ದಿನ ಹವಾಮಾನ ಇಲಾಖೆ ಮಳೆ ಎಚ್ಚರಿಕೆ ನೀಡಿದೆ.



ನಗರದ ಹಲವು ಭಾಗಗಳಲ್ಲಿ ಬೆಳಗ್ಗೆಯಿಂದ ಮೋಡ ಕವಿದ ವಾತಾವರಣ ಇತ್ತು. ಕೆಲವು ಕಡೆ ಹನಿ ಮಳೆಯಾಗುತ್ತಿತ್ತು. ಆದರೆ ಸಾಯಂಕಾಲ ಆಗುತ್ತಿದ್ದಂತೆ ಮಳೆ ಅಬ್ಬರ ಜೋರಾಯಿತು. ಇದರಿಂದ ವಾಹನ ಸವಾರರು ಪರದಾಡುವಂತಾಯಿತು.

# ತಿರುಪತಿಯಲ್ಲಿ ಭಕ್ತ ಸಾಗರ

ಅಮರಾವತಿ: ರಜೆಗಳು ಮುಗಿಯುವ ಹೊತ್ತಲ್ಲಿ ತಿರುಪತಿ ತಿರುಮಲದಲ್ಲಿ ಭಾರೀ ರಶ್ ಕಂಡುಬಂದಿದೆ.

ತೆಲುಗು ರಾಜ್ಯಗಳ ಜೊತೆಗೆ ಕರ್ನಾಟಕ, ತಮಿಳುನಾಡಿನಿಂದ ಅಧಿಕ ಸಂಖ್ಯೆಯ ಭಕ್ತರು ತಿರುಪತಿ ತಿಮ್ಮಪ್ಪನ ದರ್ಶನಕ್ಕಾಗಿ ಬಂದಿರುವ ಕಾರಣ, ಸರಿಸುಮಾರು 3 ಕಿಲೋಮೀಟರ್ ಉದ್ದಕ್ಕೆ ಸರತಿಸಾಲು ಕಂಡುಬಂದಿದೆ. ವೈಕುಂಠಂ ಕ್ಯೂ ಕಾಂಪ್ಲೆಕ್ಸ್, ನಾರಾಯಣಗಿರಿ ಶೆಡ್‌ಗಳು ತುಂಬಿಹೋಗಿವೆ. ರಿಂಗ್ ರೋಡ್‌ನಿಂದ ಆಕ್ಟೋಪಸ್ ಭವನದವರೆಗೂ ಭಕ್ತರ ಸರತಿ ಸಾಲು ಇದೆ.

ತಿರುಪತಿ ತಿಮ್ಮಪ್ಪನ ದರ್ಶನಕ್ಕೆ ಕನಿಷ್ಠ 24 ಗಂಟೆ ಹಿಡಿಯುತ್ತಿದೆ. ಸರತಿ ಸಾಲಲ್ಲಿ ಇರುವ ಭಕ್ತರಿಗೆ ಕುಡಿಯುವ ನೀರು, ಅನ್ನಪ್ರಸಾದ, ಹಾಲನ್ನು ಟಿಟಿಡಿ ಒದಗಿಸುತ್ತಿದೆ. ಮೂರು ದಿನದ ಮೊದಲು ದಿನಕ್ಕೆ 60ಸಾವಿರ ಭಕ್ತರು ದರ್ಶನ ಪಡೆಯುತ್ತಿದರು. ಇದೀಗ ಭಕ್ತರ ಸಂಖ್ಯೆ 85ರಿಂದ 90ಸಾವಿರ ಇದೆ. ಭಕ್ತರ ರಶ್ ಇನ್ನೂ ಕೆಲವು ದಿನ ಹೀಗೆ ಮುಂದುವರೆಯುವ ಸಂಭವ ಇದೆ.

ಟಿಟಿಡಿ ಮಾಹಿತಿ ಪ್ರಕಾರ, ಬುಧವಾರ ಒಂದೇ ದಿನ 81,930 ಭಕ್ತರು, ಗುರುವಾರ 76,369 ಹಾಗೂ ಶುಕ್ರವಾರ 71,510 ಭಕ್ತರು ದರ್ಶನ ಪಡೆದಿದ್ದಾರೆ. ಈ ಹಿನ್ನೆಲೆಯಲ್ಲಿ ಸದ್ಯ ಭಕ್ತರನ್ನು ನಿಯಂತ್ರಿಸುವುದು ಟಿಟಿಡಿ ಸಿಬ್ಬಂದಿಗೆ ಸವಾಲಾಗಿ ಪರಿಣಮಿಸಿದೆ.

# ರೆಡ್‌ಅಲರ್ಟ್ ಘೋಷಣೆ

ತಿರುವನಂತಪುರಂ: ಭಾರತೀಯ ಹವಾಮಾನ ಇಲಾಖೆ ಕೇರಳದ ಪತ್ತನಂತಿಟ್ಟ, ಇಡುಕ್ಕಿ, ಅಲಪ್ಪುಳ ಮತ್ತು ಕೊಟ್ಟಾಯಂ ಜಿಲ್ಲೆಗಳಲ್ಲಿ ಮೇ 20 ರವರೆಗೆ ರೆಡ್ ಅಲರ್ಟ್ ಘೋಷಿಸಿದೆ.

ಭಾರೀ ಮಳೆಯ (ಖಚಿಟಿ) ಹಿನ್ನೆಲೆ ತಿರುವನಂತಪುರಂ, ಕೊಲ್ಲಂ ಮತ್ತು ಎರ್ನಾಕುಲಂ ಜಿಲ್ಲೆಗಳಲ್ಲಿ ಮುಂದಿನ ಕೆಲವು ದಿನಗಳ ಕಾಲ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಕಣ್ಣೂರು ಮತ್ತು ಕೋಝಿಕ್ಕೋಡ್ ಹೊರತುಪಡಿಸಿ ಕೇರಳದ ಎಲ್ಲಾ ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ರೆಡ್ ಅಲರ್ಟ್ 24 ಗಂಟೆಗಳಲ್ಲಿ 20 ಸೆಂ.ಮೀಗಿಂತ ಹೆಚ್ಚು ಮಳೆಯನ್ನು ಸೂಚಿಸುತ್ತದೆ. ಆರೆಂಜ್ ಅಲರ್ಟ್ ಮಳೆ (6 ಸೆಂ.ಮೀ ನಿಂದ 20 ಸೆಂ.ಮೀ. ಹೆಚ್ಚು ಮಳೆ ಸೂಚಿಸಿದರೆ ಯೆಲ್ಲೋ ಅಲರ್ಟ್ 6- 11 ಸೆಂ.ಮೀ ಮಳೆಯನ್ನು ಸೂಚಿಸುತ್ತದೆ. ಬಲವಾದ ಗಾಳಿ ಮತ್ತು ಪ್ರಕ್ಷುಬ್ಧ ವಾತಾವರಣದ ಕಾರಣ ಮುಂದಿನ ಸೂಚನೆ ನೀಡುವವರೆಗೆ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

ಭಾರತೀಯ ರಾಷ್ಟ್ರೀಯ ಸಾಗರ ಮಾಹಿತಿ ಸೇವೆಗಳ ಕೇಂದ್ರ ಭಾನುವಾರ ಕೇರಳ ಮತ್ತು ದಕ್ಷಿಣ ತಮಿಳುನಾಡು ಕರಾವಳಿಯಲ್ಲಿ ಹೆಚ್ಚಿನ ಅಲೆಗಳ ಮುನ್ಸೂಚನೆ ನೀಡಿದೆ. ಕೇರಳ ಕರಾವಳಿಯಲ್ಲಿ 0.4 ಮೀಟರ್‌ನಿಂದ 1.2 ಮೀಟರ್‌ನಷ್ಟು ಅಲೆಗಳು ಏಳುವ ಸಾಧ್ಯತೆಯಿದೆ ಎಂದು ಸಂಸ್ಥೆ ತಿಳಿಸಿದೆ.

ಭಾನುವಾರದಿಂದ ಮೇ 22ರ ನಡುವೆ ರಾಜ್ಯದ ಕೆಲವು ಸ್ಥಳಗಳಲ್ಲಿ 30-40 ಕಿ.ಮೀ ವೇಗದ ಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯ ಬಗ್ಗೆ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.




ಒಡಿಸ್ಸಾದ ಪುರಿ ಬೀಚ್‌ನಲ್ಲಿ ಮೋದಿ ಅವರನ್ನೊಳಗೊಂಡ ಅತ್ಯದ್ಭುತ ಚಿತ್ರವಿದು....

# ಸರ್ಕಾರದ ವಿರುದ್ಧ ಇಂದು ಬಿಜೆಪಿ ಪ್ರತಿಭಟನೆ

ಬೆಂಗಳೂರು: ಲೋಕಸಭೆ ಚುನಾವಣೆ-2024 ಅಂತಿಮ ಘಟ್ಟಕ್ಕೆ ತಲುಪುತ್ತಿರುವ ಹೊತ್ತಿನಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಒಂದು ವರ್ಷವಾಗುತ್ತಿದೆ. ಒಂದೆಡೆ ಮೇ 20ರಂದು ರಾಜ್ಯ ಸರ್ಕಾರ ಒಂದು ವರ್ಷದ ಸಂಭ್ರಮದಲ್ಲಿದ್ದರೆ ವಿರೋಧ ಪಕ್ಷ ಬಿಜೆಪಿ ರಾಜ್ಯ ಸರ್ಕಾರದ ವಿರುದ್ಧ ಚಾರ್ಜ್‌ಶೀಟ್ ರೆಡಿ ಮಾಡಿದ್ದು ರಾಜ್ಯಪಾಲರಿಗೆ ದೂರು ನೀಡಲು ಮುಂದಾಗಿದೆ.




ರಾಜ್ಯಾದ್ಯಂತ ಪ್ರತಿಭಟನೆ: ರಾಜ್ಯ ಸರ್ಕಾರದ ವಿರುದ್ಧ ಈಗಾಗಲೇ ಮುಗಿ ಬೀಳುತ್ತಿರುವ ಬಿಜೆಪಿಗರು ಕಾನೂನು ಸುವ್ಯವಸ್ಥೆ ಬಗ್ಗೆಯೂ ಟೀಕೆ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಇತ್ತೀಚೆಗೆ ಸರಣಿ ಕೊಲೆ, ಅತ್ಯಾಚಾರ, ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗುತ್ತಿವೆ. ಜನತೆಯ ಬದುಕಿಗೆ ಭದ್ರತೆ ಇಲ್ಲದಾಗಿದೆ. ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ, ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ ಎಂದು ಬಿಜೆಪಿ ಆರೋಪಿಸಿದ್ದು ನಾಳೆ ರಾಜ್ಯಾದ್ಯಂತ ಪ್ರತಿಭಟನೆಗೆ ಮುಂದಾಗಿದೆ.

ರಾಜ್ಯದಲ್ಲಿ ಎಂದೂ ಕಂಡರಿಯದ ಭೀಕರ ಬರಗಾಲ ಬಂದಿದೆ. ಆದರೆ, ಬರ ನಿರ್ವಹಣೆಯಲ್ಲಿ ವಿಫಲವಾಗಿದೆ. ರೈತರಿಗೆ ಪರಿಹಾರವನ್ನು ನೀಡಿಲ್ಲ. ರೈತರ ಬದುಕು ದುಸ್ತರವಾಗಿದೆ. ಕೇಂದ್ರ ಸರ್ಕಾರ ನೀಡಿದ ಬರ ಪರಿಹಾರದ ಹಣವೂ ರೈತರಿಗೆ ತಲುಪುತ್ತಿಲ್ಲ. ಅದನ್ನು ಬ್ಯಾಂಕ್‌ಗಳು ಸಾಲಕ್ಕೆ ಬಳಸಿಕೊಳ್ಳುತ್ತಿವೆ. ಇನ್ನು ಸರ್ಕಾರವು ಒಂದು ವರ್ಷದಲ್ಲಿ ಹೊಸ ಕಾಮಗಾರಿಗಳಿಗೆ ಗುದ್ದಲಿ ಪೂಜೆಯನ್ನೂ ಮಾಡಿಲ್ಲ.

ಇಷ್ಟಲ್ಲದೆ ಶಾಸಕರ ಪರಿಸ್ಥಿತಿ ಇನ್ನೂ ಕಷ್ಟಕರವಾಗಿದೆ. ಶಾಸಕರಿಗೆ ಅನುದಾನ ಕೊಡಲು ಹಣವಿಲ್ಲ. ಅನುದಾನ ಕೊಡುತ್ತೇವೆ, ಕೊಡುತ್ತೇವೆ ಎಂದೇ ದಿನ ದೂಡುತ್ತಿದೆ ಎಂದು ಸ್ವಪಕ್ಷೀಯ ಶಾಸಕರೇ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂಬುದನ್ನು ಜನರ ಮುಂದಿಡಲು ಬಿಜೆಪಿ ಮುಂದಾಗಿದೆ.

ರಾಜ್ಯ ಸರ್ಕಾರದ ಮೇಲೆ ಮಾಡಲಾಗುವ ಎಲ್ಲ ಆರೋಪಗಳ ಪಟ್ಟಿಯನ್ನು ಒಂದು ಪುಸ್ತಕ ರೂಪದಲ್ಲಿ ತರಲು ಬಿಜೆಪಿ ಸಿದ್ಧತೆ ನಡೆಸಿದೆ ಎನ್ನಲಾಗಿದ್ದು, ಇದನ್ನು ದೊಡ್ಡ ಮಟ್ಟದಲ್ಲಿ ಅಭಿಯಾನವನ್ನಾಗಿ ಕೈಗೊಳ್ಳಲು ಚಿಂತಿಸಿದೆ ಎಂದು ಮೂಲಗಳು ತಿಳಿಸಿವೆ.

ರಾಜ್ಯಪಾಲರ ಬಳಿಗೆ ನಿಯೋಗ: ಈ ಎಲ್ಲಾ ವಿಚಾರಗಳನ್ನು ಮುಂದಿಟ್ಟುಕೊಂಡು ರಾಜ್ಯ ಸರ್ಕಾರ ವಿರುದ್ಧ ಬಿಜೆಪಿ ನಿಯೋಗ ನಾಳೆ ರಾಜ್ಯಪಾಲರಿಗೆ ದೂರು ಸಲ್ಲಿಸಲು ಮುಂದಾಗಿದೆ.

# ಕಾನೂನು ಸುವ್ಯವಸ್ಥೆ ಹತೋಟಿಯಲ್ಲಿದೆ: ಪರಂ

ತುಮಕೂರು: ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹತೋಟಿಯಲ್ಲಿದೆ. ಬಿಜೆಪಿಯವರನ್ನು ಕೇಳಿಕೊಂಡು ಕಾನೂನು ಪಾಲನೆ ಮಾಡುತ್ತಿಲ್ಲ. ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ (ಎನ್‌ಸಿಆರ್‌ಬಿ) ಯ ನಾಲ್ಕು ತಿಂಗಳ ಹಳೆಯ ವರದಿಯನ್ನು ಆಧರಿಸಿ ಪರಿಸ್ಥಿತಿಯನ್ನು ಅಂದಾಜಿಸಲು ಸಾಧ್ಯವಿಲ್ಲ ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ ಹೇಳಿದ್ದಾರೆ.

ರಾಜ್ಯದಲ್ಲಿ ಅಪರಾಧ ಪ್ರಕರಣಗಳ ಪ್ರಮಾಣ ಹೆಚ್ಚಾಗಿದೆ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಎನ್‌ಸಿಆರ್‌ಬಿ ಬಿಡುಗಡೆ ಮಾಡಿರುವ ವರದಿ ನನ್ನ ಗಮನಕ್ಕೆ ಬಂದಿದ್ದು, ಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು. ಆದರೆ, ಘಟನೆಗಳ ಕಾರಣಗಳು ಒಂದರಿಂದ ಇನ್ನೊಂದಕ್ಕೆ ಭಿನ್ನವಾಗಿರುವುದರಿಂದ ಮಾಡಲು ಸಾಧ್ಯವಾಗುವುದಿಲ್ಲ ಎಂದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ನಿಯಂತ್ರಣದಲ್ಲಿದೆ ಮತ್ತು ನಾವು ಬಿಜೆಪಿಯಿಂದ ಪಾಠ ಕಲಿಯಬೇಕಾಗಿಲ್ಲ. ಬಿಜೆಪಿಯವರು ಕಾನೂನು ಸುವ್ಯವಸ್ಥೆ ಹಾಳು ಮಾಡಲು ಎಷ್ಟೇ ಪ್ರಯತ್ನಿಸಿದರೂ ಜನರ ಸುರಕ್ಷತೆಗಾಗಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲು ನಾವು ಸಿದ್ಧರಿದ್ದೇವೆ ಎಂದರು.

ಬಿಜೆಪಿಯವರ ಆಡಳಿತದಲ್ಲಿ ಎಷ್ಟು ಕೊಲೆಗಳು ನಡೆದಿದ್ದವು. ನಮ್ಮ ಸರ್ಕಾರದ ಅವಧಿಯಲ್ಲಿ ಎಷ್ಟು ನಡೆದಿವೆ ಎಂಬ ಅಂಕಿಅಂಶಗಳನ್ನು ಬಿಡುಗಡೆ ಶೀಘ್ರದಲ್ಲೇ ಮಾಡಲಾಗುವುದು. ಆಗ ಯಾರ ಅವಧಿಯಲ್ಲಿ ಹೆಚ್ಚು ಕೊಲೆಗಳು ನಡೆದಿದ್ದವು ಎಂಬುದು ಜನರಿಗೆ ಗೊತ್ತಾಗುತ್ತದೆ ಎಂದು ತಿಳಿಸಿದರು. ದೇವರಾಜೇಗೌಡ ಅವರಿಗೆ 100 ಕೋಟಿ ರೂ. ಆಮಿಷ ಒಡ್ಡಿರುವ ಬಗ್ಗೆ ಎಸ್‌ಐಟಿ ಅಧಿಕಾರಿಗಳು ನೋಡಿಕೊಳ್ಳುತ್ತಾರೆ. 'ನಾನು ಹೊರಗೆ ಬಂದರೆ ಕಾಂಗ್ರೆಸ್ ಸರ್ಕಾರ ಪತನವಾಗುತ್ತದೆ' ಎಂಬ ದೇವರಾಜೇಗೌಡ ಹೇಳಿಕೆಗೆ ಪ್ರತಿಕ್ರಿಯಿಸಿ, 'ಹಾಗಾದರೆ ಅವರು ಜೈಲಿನಲ್ಲೇ ಇರಬೇಕಾಗುತ್ತದೆ' ಎಂದರು.

ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುವುದು ಈಗ ಮತ್ತಷ್ಟು ಸುಲಭ

ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...

www.munjaneevartheepaper.com

# ಬಿಐಇಟಿ ಕಾಲೇಜಿಗೆ ಯುಜಿಸಿಯಿಂದ ಅನುಮೋದನೆ

ದಾವಣಗೆರೆ: ದಾವಣಗೆರೆಯ ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾ ವಿದ್ಯಾಲಯಕ್ಕೆ 2024–25ನೇ ಸಾಲಿನ ಶೈಕ್ಷಣಿಕ ಸಾಲಿನಿಂದ ಸ್ವಾಯತ್ತ ಸಂಸ್ಥೆಯಾಗಿ ಕಾರ್ಯ ನಿರ್ವಹಿಸಲು ವಿಶ್ವ ವಿದ್ಯಾಲಯ ಧನ ಸಹಾಯ ಆಯೋಗದ ಅನುಮತಿ ದೊರೆತಿದೆ ಎಂದು ಪ್ರಾಚಾರ್ಯ ಡಾ. ಎಚ್.ಬಿ. ಅರವಿಂದ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಕಳೆದ 26 ವರ್ಷಗಳಿಂದ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಸಂಯೋಜಿತ ಕಾಲೇಜಾಗಿ ಕಾರ್ಯ ನಿರ್ವಹಿಸುತ್ತಿತ್ತು. ಸ್ವಾಯತ್ತ ಸಂಸ್ಥೆಯಾಗಿ ಕಾರ್ಯ ನಿರ್ವಹಿಸಲು 2023ರ ಮಾ. 3 ರಂದು ಯುಜಿಸಿಗೆ ಮನವಿ ಸಲ್ಲಿಸಲಾಗಿತ್ತು. 2024ರ ಜ. 20 ರಂದು ಯುಜಿಸಿ ಸಂಸ್ಥೆ ಕಾಲೇಜಿಗೆ ಭೇಟಿ ನೀಡಿ ಎಲ್ಲ ರೀತಿಯಲ್ಲಿ ಪರಿಶೀಲಿಸಿ ಹತ್ತು ವರ್ಷಗಳವರೆಗೆ ಸ್ವಾಯತ್ತ ಸಂಸ್ಥೆಯಾಗಿ ಕಾರ್ಯ ನಿರ್ವಹಿಸಲು ಅನುಮೋದನೆ ಕೊಟ್ಟಿದೆ ಎಂದು ತಿಳಿಸಿದರು.




ಸ್ವಾಯತ್ತ ಸಂಸ್ಥೆಯಾಗಿ ಕಾರ್ಯ ನಿರ್ವಹಿಸಲು ಅನುಮೋದನೆ ದೊರೆತ ಕಾರಣ ಪಠ್ಯಕ್ರಮದಲ್ಲಿ ನಮ್ಮ ಕಾಲೇಜಿಗೆ ಶೇ. 30 ರಷ್ಟು ರಿಯಾಯಿತಿ ದೊರೆಯುತ್ತದೆ. ನಮ್ಮ ವಿದ್ಯಾರ್ಥಿಗಳಿಗೆ ಅನುಗುಣವಾದ ಪಠ್ಯ ಸೇರ್ಪಡೆ ಮಾಡಬಹುದು. ಪರೀಕ್ಷೆ ನಡೆಸುವುದರ ಮೇಲೆ ಸಂಪೂರ್ಣ ನಿಯಂತ್ರಣ ಹೊಂದಿರುತ್ತೇವೆ. ಆದಷ್ಟು ಬೇಗ ಪರೀಕ್ಷೆ ನಡೆಸಿ, ಫಲಿತಾಂಶ ಕೊಡಲು ಅನುಕೂಲ ಆಗುತ್ತದೆ. ಸ್ವಾಯತ್ತ ಸಂಸ್ಥೆ ಆದ ನಂತರವೂ ಆಯಾ ವರ್ಷ ಸರ್ಕಾರ ನಿಗದಿಪಡಿಸಿದ ಶುಲ್ಕ ಮತ್ತು ಪ್ರವೇಶ ನಿಯಮಗಳನ್ನು ಪಾಲಿಸಬೇಕಾಗುತ್ತದೆ. ಈಗ ಬಿಐಇಟಿ ಬೆಂಗಳೂರಿನ ಬಿಎಂಎಸ್, ಆರ್ ವಿ ಇಂಜಿನಿಯರಿಂಗ್ ಕಾಲೇಜ್ ನಂತೆ ಪ್ರತಿಷ್ಠಿತ ಸಂಸ್ಥೆಯಾಗಲಿದೆ ಎಂದು ತಿಳಿಸಿದರು. ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ವಿವಿಧ ಕೋರ್ಸ್ ಅಭ್ಯಾಸ ಮಾಡಿರುವ 355 ವಿದ್ಯಾರ್ಥಿಗಳಿಗೆ ದೇಶದ ವಿವಿಧ ಪ್ರತಿಷ್ಠಿತ ಕಂಪನಿಗಳಲ್ಲಿ ಉದ್ಯೋಗ ದೊರೆತಿದೆ ಎಂದು ತಿಳಿಸಿದರು.

ಮೇ. 25 ರಂದು ಅಂತಿಮ ವರ್ಷದ ವಿದ್ಯಾರ್ಥಿಗಳ ತಯಾರಿಸಿದ ವಿವಿಧ ಆವಿಷ್ಕಾರ, ಪರಿಕರಗಳ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿಐಇಟಿ ನಿರ್ದೇಶಕ ಪ್ರೊ. ವೈ. ವೃಷಭೇಂದ್ರಪ್ಪ, ಡಾ. ಜಿ.ಪಿ. ದೇಸಾಯಿ, ಡಾ. ನಿರ್ಮಲ, ಡಾ. ಕರಿಬಸಪ್ಪ ಇದ್ದರು.

# ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಯೇ ಇಲ್ಲ: ಚಿನ್ನಸ್ವಾಮಿ

ಕನಕಪುರ: ರಾಜ್ಯದಲ್ಲಿ ಹಾಡುಹಗಲೇ ಮನೆಗೆ ನುಗ್ಗಿ ಕೊಲೆ ಮಾಡುವ ಪರಿಸ್ಥಿತಿ ನಿರ್ಮಾಣವಾಗಿರುವ ವಾತಾವರಣ ಸೃಷ್ಟಿಯಾಗಿರುವುದು ನೋಡಿದರೆ ಅಪರಾಧಿಗಳಿಗೆ ಕಾನೂನು ಭಯ ಎಂಬುದೇ ಇಲ್ಲದಂತಾಗಿದೆ. ಮಾನವಂತರು ಮನೆಯಿಂದ ಹೊರಬರಲು ಯೋಚಿಸುವಂತಾಗಿದೆ ಎಂದು ಜೆಡಿಎಸ್ ರಾಜ್ಯ ಯುವ ಉಪಾಧ್ಯಕ್ಷ ಚಿನ್ನಸ್ವಾಮಿ ಅಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಚಿನ್ನಸ್ವಾಮಿ



ಹುಬ್ಬಳ್ಳಿಯಲ್ಲಿ ಇತ್ತೀಚಿಗೆ ಕಾಲೇಜು ಕ್ಯಾಂಪಸ್‌ನಲ್ಲಿ ನಡೆದ ಘೋರ ಘಟನೆ ಮಾಸುವ ಮುನ್ನವೆ ಮತ್ತೆ ಮನೆಗೆ ನುಗ್ಗಿ ಕೊಲೆಗೈದಿರುವುದು ನಾಗರಿಕ ಪ್ರಪಂಚವೇ ತಲೆ ತಗ್ಗಿಸುವಂತಾಗಿದೆ.

ಹುಬ್ಬಳ್ಳಿಯಲ್ಲಿ ಅಂಜಲಿ ಅಂಬಿಗೇರ ಇವರ ಮನೆಗೆ ನುಗ್ಗಿ ಎಲ್ಲರ ಎದುರಿಗೆ ಕೊಲೆ ಮಾಡಿದ ಪಾಪಿಷ್ಠ ಕೃತ್ಯ ನಡೆದರೂ ರಾಜ್ಯದಲ್ಲಿಗೃಹ ಇಲಾಖೆ ಕೋಮಾದಲ್ಲಿದೆಯೇ ಎಂಬ ಅನುಮಾನ ಜನತೆಗೆ ಕಾಡುತ್ತಿದೆ ಪ್ರಶ್ನಿಸಿದ್ದಾರೆ.

ಇನ್ನೊಬ್ಬರ ಮನೆಗೆ ಅವರ ಅನುಮತಿ ಇಲ್ಲದೇ ಪ್ರವೇಶ ಮಾಡುವುದೇ ದೊಡ್ಡ ಅಪರಾಧ. ಅಂತಹುದರಲ್ಲಿ ಚಾಕು ಇಟ್ಟುಕೊಂಡೆ ಮನೆಯೊಳಗೆ ರಾಜಾರೋಷವಾಗಿ ನುಗ್ಗಿ ಯುವತಿಯನ್ನು ಕೊಲೆ ಮಾಡಿರುವುದು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಎಂಬುದು ಇದೆಯೇ, ಇಲ್ಲವೇ, ತುಘಲಕ್ ಮಾದರಿ ಆಡಳಿತ ಇದೆಯೇ ಎಂಬುದು ಅರ್ಥವಾಗುತ್ತಿಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಘಟನೆಗೆ ಸಂಬಂಧಿತ ಆರೋಪಿಗೆ ಎನ್‌ಕೌಂಟರ್ ಮಾಡಬೇಕು. ವಿನಾಕಾರಣ ಪರಿಶೀಲನೆ, ವಿಚಾರಣೆ ಎಂದು ಕಾಲಹರಣ ಮಾಡದೇ ತಪ್ಪಿತಸ್ಥರನ್ನು ಗಲ್ಲಿಗೇರಿಸಬೇಕು, ಕುಟುಂಬಸ್ಥರಿಗೆ ಭದ್ರತೆ ಹಾಗೂ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ.

# ಕ್ಯಾನ್ಸರ್ ಕಾಯಿಲೆ ಪತ್ತೆ ಹಚ್ಚಲು ಅತ್ಯಾಧುನಿಕ ಯಂತ್ರ

ಶಿವಮೊಗ್ಗ: ಸಹ್ಯಾದ್ರಿ ನಾರಾಯಣ ಆಸ್ಪತ್ರೆಯಲ್ಲಿ ಎಂಡೋಸ್ಕೋಪಿಕ್ ಅಲ್ಟ್ರಾಸೌಂಡ್ ಎಂಬ ಅತ್ಯಾಧುನಿಕ ಯಂತ್ರವನ್ನು ಅಳವಡಿಸಲಾಗಿದ್ದು, ಇದರಿಂದ ಕ್ಯಾನ್ಸರ್ ಸೇರಿದಂತೆ ಅನೇಕ ಕಾಯಿಲೆಗಳನ್ನು ನಿಖರವಾಗಿ ಪತ್ತೆ ಹಚ್ಚಬಹುದಾಗಿದೆ ಎಂದು ಆಸ್ಪತ್ರೆಯ ವೈದ್ಯ ಡಾ. ವಿ. ಶಿವಕುಮಾರ್ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಇದೊಂದು ಅಪರೂಪದ ಯಂತ್ರವಾಗಿದೆ. ಇತರೆ ಸಾಮಾನ್ಯ ಎಂಡೋಸ್ಕೋಪಿಯಲ್ಲಿ ಪತ್ತೆಯಾಗದ ಅನೇಕ ಕಾಯಿಲೆಗಳನ್ನು ಈ ಯಂತ್ರದಲ್ಲಿ ಪರೀಕ್ಷೆಯಿಂದ ಪತ್ತೆ ಹಚ್ಚಬಹುದಾಗಿದೆ. ಅನ್ನನಾಳ, ಜಠರ, ಲಿವರ್, ಲಂಗ್ಸ್, ಸೇರಿದಂತೆ ದೇಹದ ಅನೇಕ ಭಾಗಗಳನ್ನು ಈ ಯಂತ್ರದಿಂದ ಪರೀಕ್ಷಿಸಿ ಕಾಯಿಲೆ ಪತ್ತೆ ಹಚ್ಚಬಹುದು. ಮತ್ತು ಅನ್ನನಾಳದ ಗೆಡ್ಡೆಗಳು ಸೇರಿದಂತೆ ಕ್ಷಯ ರೋಗದ ಕಾಯಿಲೆಯನ್ನು ಗುರುತಿಸಬಹುದಾಗಿದೆ ಎಂದರು.

ಈಗಾಗಲೇ ಈ ಯಂತ್ರ ಬಳಸಿ ಒಬ್ಬ ರೋಗಿಗೆ ಕ್ಯಾನ್ಸರ್ ಕಾಯಿಲೆಯನ್ನು ಪತ್ತೆ ಹಚ್ಚಿ ಶಸ್ತ್ರಚಿಕಿತ್ಸೆಗೆ ಒಳಪಡಿಸಿ ಗುಣಪಡಿಸಲಾಗಿದೆ. ಸಿಟಿ ಸ್ಕ್ಯಾನ್ ನಿಂದಲೂ ಪತ್ತೆಯಾಗದ ಕಾಯಿಲೆಗಳ ಲಕ್ಷಣಗಳು ಇದರಿಂದ ಗೊತ್ತಾಗುತ್ತವೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಡಾ. ಸುಮೇಶ್ ನಾಯರ್, ಡಾ. ಚಕ್ರವರ್ತಿ ಸಂಡೂರ್, ರಾಜಾಸಿಂಗ್ ಎಸ್.ವಿ. ಇದ್ದರು

# ಸಿಲಿಂಡರ್ ಸ್ಫೋಟ; ಗಾಯಗೊಂಡವರ ಆರೋಗ್ಯ ವಿಚಾರಿಸಿದ ಶಾಸಕ

ಕುಣಿಗಲ್ : ಪಟ್ಟಣದ ಸಂತೆಬೀದಿಯಲ್ಲಿ ಇರುವ ರವಿಕುಮಾರ್ ಎಂಬುವವರ ಮನೆಯಲ್ಲಿ ಸಂಜೆ ಅಡುಗೆ ಮಾಡುವ ಸಂದರ್ಭದಲ್ಲಿ ಸಿಲಿಂಡರ್ ಸ್ಫೋಟಿಸಿ ಹಲವರು ಗಾಯಗೊಂಡ ಘಟನೆ ನಡೆದಿದೆ.

ಮಾಹಿತಿ ಹಿನ್ನೆಲೆ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿಯನ್ನು ನಂದಿಸಿದ್ದಾರೆ. ಸಿಲಿಂಡರ್ ಸ್ಫೋಟದ ತೀವ್ರತೆಗೆ ಮನೆಯಲ್ಲಿದ್ದ ದಿನಸಿ ಸಾಮಗ್ರಿ ಹಾಗೂ ಕಿಟಕಿ ಬಾಗಿಲುಗಳು ಛಿದ್ರಗೊಂಡಿದೆ ಗೋಡೆಗಳು ಬಿರುಕು ಬಿಟ್ಟಿದೆ.

ಘಟನೆಯಲ್ಲಿ ಮನೆಯಲ್ಲಿದ್ದ ರವಿಕುಮಾರ್ ಪತ್ನಿ ಶೃತಿ(45) ಮಕ್ಕಳಾದ ಕುಶಾಲ್ (11) ಹೇಮಲತಾ(16) ಗಂಭೀರ ಗಾಯಗಳಾಗಿದೆ.

ಸಿಲಿಂಡರ್ ಸ್ಫೋಟದ ಶಬ್ದ ಕೇಳಿ ಮನೆಯೊಳಗೆ ಬಂದ ಪಕ್ಕದ ಮನೆಯ ಮಂಜಮ್ಮ(42) ಶಿವಣ್ಣ(45) ಸಮೀನಾ(46) ಎಂಬುವವರಿಗೂ ಬೆಂಕಿ ತಗುಲಿ ಗಂಭೀರ ಗಾಯಗಳಾಗಿದ್ದು ಗಾಯಳುಗಳನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ವಿಕ್ಟೋರಿಯ ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ಘಟನೆಗೆ ಸಂಬಂಧ ಸ್ಥಳಕ್ಕೆ ಕುಣಿಗಲ್ ಉಪ ವಿಭಾಗದ ಡಿವೈಎಸ್ಪಿ ಓಂ ಪ್ರಕಾಶ್, ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಈ ವೇಳೆ ಅಗ್ನಿಶಾಮಕ ಅಧಿಕಾರಿಗಳಾದ ಕೆಂಪರಾಜು, ಭೀಮನಗೌಡ, ಚೇತನ್, ಮಂಜುನಾಥ್, ರಾಜೇಶೇಖರ್ ಹಾಜರಿದ್ದರು.



**ಆಸ್ಪತ್ರೆಗೆ ಶಾಸಕ ಡಾ, ರಂಗನಾಥ್ ಭೇಟಿ**

ಸಿಲಿಂಡರ್ ಸ್ಫೋಟಗೊಂಡು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಾಗಿರುವ ಗಾಯಾಳುಗಳ ಬಗ್ಗೆ ಮಾಹಿತಿ ತಿಳಿದು ಕುಣಿಗಲ್ ಶಾಸಕ ಡಾ, ರಂಗನಾಥ್, ಗುರುವಾರ ರಾತ್ರಿ ಗಾಯಗೊಂಡವರನ್ನು ಬೇಟಿಯಾಗಿ ಆರೋಗ್ಯ ವಿಚಾರಿಸಿದ್ದಾರೆ ಬಳಿಕ ವೈದ್ಯರಿಂದ ಮಾಹಿತಿ ಪಡೆದು ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ಸೂಚಿಸಿ ಕುಟುಂಬಸ್ಥರಿಗೆ ಧೈರ್ಯ ತುಂಬಿದ್ದಾರೆ.

# ಜಾಮೀನು ಅರ್ಜಿ ತಿರಸ್ಕರಿಸಿದ ಕನಕಪುರ ನ್ಯಾಯಾಲಯ

ಕನಕಪುರ: ನಗರದ ಅರ್ಬನ್ ಕೋ–ಆಪರೇಟಿವ್ ಕ್ರೆಡಿಟ್ ಸೊಸೈಟಿಯಲ್ಲಿನ ಕೋಟ್ಯಾಂತರ ರೂಪಾಯಿ ದುರುಪಯೋಗದ ಒಂಬತ್ತು ಆರೋಪಿಗಳಲ್ಲಿ ಇಬ್ಬರು ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಎರಡನೇ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶ ಎಚ್.ಎನ್.ಕುಮಾರ್ ಅವರು ಯಾವುದೇ ಕಾರಣ ನೀಡದೆ ರದ್ದುಗೊಳಿಸಿದ್ದು, ಉಳಿದ 7 ಮಂದಿ ವಿಚಾರಣೆಯನ್ನು ಕಾಯ್ದಿರಿಸಿ ಮೇ 23ಕ್ಕೆ ಮುಂದೂಡಿ ಆದೇಶ ಹೊರಡಿಸಿದ್ದಾರೆ.

ಸೊಸೈಟಿ ಮುಖ್ಯ ವ್ಯವಸ್ಥಾಪಕ ರವೀಂದ್ರ ಹಾಗೂ ಲೆಕ್ಕ ಪಾಲಕ ಯಶೋದಾಬಾಯಿ ಅವರ ಜಾಮೀನು ರದ್ದುಗೊಳಿಸಲಾಗಿದೆ. ನಗರದ ಕೋ–ಅಪರೇಟಿವ್ ಸೊಸೈಟಿ ಮುಖ್ಯವ್ಯವಸ್ಥಾಪಕ ಹಾಗೂ ನಿತ್ಯನಿಧಿ ಶೇವಣಿ ಸಂಗ್ರಹಗಾರರು ಸೇರಿ 9 ಮಂದಿ 1.22,43,094 ರೂಪಾಯಿಯನ್ನು ಅವಧಿಯಲ್ಲಿ ದುರುಪಯೋಗ ಪಡಿಸಿಕೊಂಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಸೊಸೈಟಿಯ ನಿವೃತ್ತ ಪ್ರಧಾನ ವ್ಯವಸ್ಥಾಪಕ ಬಿ.ರಾಮಚಂದ್ರ, ನಿವೃತ್ತ ಮುಖ್ಯ ವ್ಯವಸ್ಥಾಪಕ ಹನುಮಾನ್‌ಸಿಂಗ್, ಹಾಲಿ ಮುಖ್ಯ ವ್ಯವಸ್ಥಾಪಕ ಸಿ.ರವೀಂದ್ರ, ನಿವೃತ್ತ ಸಹಾಯಕ ಕಾರ್ಯದರ್ಶಿ ಎಸ್.ಎಂ.ಬಸವಪ್ರಕಾಶ್, ಲೆಕ್ಕಪಾಲಕಿ ಯಶೋದಬಾಯಿ, ಕ್ಯಾಶಿಯರ್ ಕುಮಾರಸ್ವಾಮಿ, ಆಭರಣ ಮೌಲ್ಯಮಾಪಕ ಚಂದ್ರಮೋಹನ್, ನಿತ್ಯ ನಿಧಿ ಶೇವಣಿ ಸಂಗ್ರಹಕಾರರಾದ ಪ್ರಭುದೇವ್, ಲಕ್ಷ್ಮೀಕಾಂತ್ ವಿರುದ್ಧ ಎ.13ರಂದು ಸೊಸೈಟಿ ಪ್ರಭಾರ ವ್ಯವಸ್ಥಾಪಕರು 'ನಗರ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಬ್ಯಾಂಕ್ ರಚಿಸಿದ್ದ ಅಂತರಿಕ ಲೆಕ್ಕಪರಿಶೋಧನಾ ವರದಿಯಲ್ಲಿಯೂ ಹಣ ದುರುಪಯೋಗವಾಗಿರುವುದು ಕಂಡುಬಂದಿದೆ ಎನ್ನಲಾಗಿದ್ದು, ನ್ಯಾಯಲಯದಲ್ಲಿ ವಿಚಾರಣಾ ಹಂತದ ವೇಳೆ 9 ಮಂದಿ ಅಧಿಕಾರಿಗಳು ನಿರೀಕ್ಷಣಾ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ನ್ಯಾಯಾಲಯವು ಇಬ್ಬರ ಜಾಮೀನು ಅರ್ಜಿ ರದ್ದುಗೊಳಿಸಿ, ಉಳಿದ ಆರೋಪಿಗಳ ವಿಚಾರಣೆಯನ್ನು ಕಾಯ್ದಿರಿಸಿದೆ.

ಅರ್ಬನ್ ಕೋ-ಅಪರೇಟಿವ್ ಕ್ರೆಡಿಟ್ ಸೊಸೈಟಿ ಹಣ ದುರುಪಯೋಗದ ಪ್ರಕರಣವು ನ್ಯಾಯಾಲಯದ ಹಂತದಲ್ಲಿದೆ. ಇದರಿಂದ ಗ್ರಾಹಕರಿಗೆ ಯಾವುದೇ ತೊಂದರೆಯಾಗುವುದಿಲ್ಲ, ಸಹಕಾರ ಇಲಾಖೆ ಹಾಗೂ ನ್ಯಾಯಾಂಗ ವ್ಯವಸ್ಥೆಯ ಮೇಲೆ ನಂಬಿಕೆಯಿದೆ. ಈ ಪ್ರಕರಣದ ಊಹಾಪೋಹಗಳಿಗೆ ಕಿವಿಕೊಡದೆ ಎಂದಿನಂತೆ ವ್ಯಾಪಾರ ವಹಿವಾಟುಗಳಿಗೆ ಗ್ರಾಹಕರು ಸಹಕಾರ ನೀಡಬೇಕು.
-ಕಬ್ಬಾಳೇಗೌಡ, ಅರ್ಬನ್

# 9 ಮಂದಿ ಸಜೀವ ದಹನ

ಚಂಡಿಗಢ: ಹರಿಯಾಣದ ಕುಂಡಲಿ–ಮನೇಸರ್–ಪಲ್ವಾಲ್ ಎಕ್ಸ್‌ಪ್ರೆಸ್ ವೇನಲ್ಲಿ ನಡೆದ ಭೀಕರ ಅಗ್ನಿ ಅವಘಡದಲ್ಲಿ 9 ಮಂದಿ ಭಕ್ತರು ಸಜೀವ ದಹನವಾಗಿರುವ ಘಟನೆ ಶನಿವಾರ ನಸುಕಿನ ಜಾವದಲ್ಲಿ ನಡೆದಿದೆ.

9 ಮಂದಿ ಭಕ್ತರು ಸಜೀವ ದಹನ ಹೊಂದಿದ್ದು, 10ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಉತ್ತರ ಪ್ರದೇಶದ ಮಥುರಾ ಮತ್ತು ವೃಂದಾವನಕ್ಕೆ ತೀರ್ಥಯಾತ್ರೆಯಿಂದ ಕೈಗೊಂಡು ಹಿಂದಿರುಗುತ್ತಿದ್ದಾಗ ನುಹ್ ಪ್ರದೇಶದ ಬಳಿ ಬಸ್‌ನಲ್ಲಿ ಬೆಂಕಿ ಕಾಣಿಸಿಕೊಂಡು ಭಕ್ತರು ಸುಟ್ಟು ಕರಕಲಾಗಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ.

ಬಸ್‌ನಲ್ಲಿ ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ ಒಂದೇ ಕುಟುಂಬದ 60ಕ್ಕೂ ಹೆಚ್ಚು ಮಂದಿ ಪ್ರಯಾಣಿಸುತ್ತಿದ್ದರು. ಇವರೆಲ್ಲರೂ ಪಂಜಾಬ್ ಮೂಲದವರು ಎಂದು ತಿಳಿದುಬಂದಿದೆ.

ನಾವು 10 ದಿನಗಳ ಕಾಲ ಪವಿತ್ರ ಕ್ಷೇತ್ರಗಳಿಗೆ ತೀರ್ಥಯಾತ್ರೆ ಕೈಗೊಂಡಿದ್ದು, ಅದಕ್ಕಾಗಿ ಬಾಡಿಗೆ ಬಸ್ ಪಡೆದಿದ್ದವು. ಶನಿವಾರ ನಸುಕಿನ ಜಾವ 1.30ರ ಸುಮಾರಿಗೆ ಮನೆಗೆ ಮರಳುತ್ತಿದ್ದ ವೇಳೆ ಬಸ್‌ನ ಹಿಂಭಾಗದಲ್ಲಿ ಬೆಂಕಿಯ ಕಿಡಿ ಹತ್ತಿಕೊಂಡಿರುವುದು ಗಮನಿಸಿ ಚಾಲಕನನ್ನು ಎಚ್ಚರಿಸಲು ಪ್ರಯತ್ನಿಸಿದ್ದೆವು. ಆದರೆ ಅಷ್ಟರಲ್ಲಿ ಅವಘಡ ಸಂಭವಿಸಿತು ಎಂದು ಬದುಕುಳಿದವರು ತಿಳಿಸಿದ್ದಾರೆ.

ಹೆಚ್ಚುತ್ತಿರುವ ಬೆಂಕಿಯನ್ನು ನೋಡಿದ ಬೈಕ್ ಸವಾರನೊಬ್ಬ ಬಸ್ ಅನ್ನು ಹಿಂಬಾಲಿಸಿ ನಿಲ್ಲಿಸಲು ಚಾಲಕನಿಗೆ ಎಚ್ಚರಿಕೆ ನೀಡಿದ್ದ. ಬಳಿಕ ಸ್ಥಳೀಯರು ಬೆಂಕಿಯನ್ನು ನಂದಿಸಲು ಪ್ರಯತ್ನಿಸಿದರು. ಬಸ್‌ನ ಮುಂಭಾಗದಲ್ಲಿದ್ದ ಹಲವರನ್ನು ರಕ್ಷಿಸಲಾಯಿತು. ಬೆಂಕಿ ಕಾಣಿಸಿಕೊಳ್ಳಲಿರುವ ಕಾರಣ ಇನ್ನೂ ಪತ್ತೆಯಾಗಿಲ್ಲ.

# ಡಿ.ಟಿ. ಶ್ರೀನಿವಾಸ್ ಪರವಾಗಿ ನಂಜೇಗೌಡ ಮತಯಾಚನೆ

ಮಾಲೂರು: ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಹಲವು ರೀತಿಯ ಸಮಸ್ಯೆಗಳನ್ನು ಎದುರಿಸುತ್ತಿದ್ದು ಶಿಕ್ಷಕರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಶಿಕ್ಷಣ ಕ್ಷೇತ್ರದ ಅಮೂಲಾಗ್ರ ಬದಲಾವಣೆಗೆ ವಿಧಾನ ಪರಿಷತ್ ಆಗ್ನೇಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿರುವ ಡಿ.ಟಿ. ಶ್ರೀನಿವಾಸ್ ಅವರಿಗೆ ಜೂನ್ 3 ರಂದು ನಡೆಯಲಿರುವ ಚುನಾವಣೆಯಲ್ಲಿ ಪ್ರಥಮ ಪ್ರಾಶಸ್ತ್ಯ ಮತಗಳನ್ನು ನೀಡುವುದರ ಮೂಲಕ ಬೆಂಬಲಿಸುವಂತೆ ಶಾಸಕ ಕೆ ವೈ ನಂಜೇಗೌಡ ಹೇಳಿದರು.

ಪಟ್ಟಣದ ವೈಟ್ ಗಾರ್ಡನ್ ಬಡಾವಣೆಯ ಮಾನಸ ನರ್ಸಿಂಗ್ ಕಾಲೇಜಿನ ಸಭಾಂಗಣದಲ್ಲಿ ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ಸ್ಪರ್ಧಿಸಿರುವ ಡಿ.ಟಿ. ಶ್ರೀನಿವಾಸ್ ಅವರ ಪರವಾಗಿ ನಡೆದ ಮತಯಾಚನೆ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಶಿಕ್ಷಕರು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಹಾಗೂ ಶಿಕ್ಷಕರ ಪರವಾಗಿ ಧ್ವನಿ ಎತ್ತಲು ವಿಧಾನಸಭೆ ಶಾಸನ ಸಭೆಯಲ್ಲಿ ಕೈಗೊಳ್ಳುವ ಹೊಸ ಶಾಸನಗಳು ಕಾಯ್ದೆಗಳು ಯೋಜನೆಗಳಿಗೆ ವಿಧಾನ ಪರಿಷತ್ತಿನಲ್ಲಿ ಸದಸ್ಯರ ಬಹುಮತ ಅಗತ್ಯವಿರುವ ಕಾರಣ ಶಿಕ್ಷಕರು ಸರ್ಕಾರದ ಪರ ಜನಪ್ರತಿನಿಧಿಯನ್ನು ಆಯ್ಕೆ ಮಾಡಿದರೆ ಸರ್ಕಾರಕ್ಕೆ ಅನುಕೂಲವಾಗುತ್ತದೆ. ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿರುವ ಅಭ್ಯರ್ಥಿ ಡಿ.ಟಿ. ಶ್ರೀನಿವಾಸ ಅವರು ಕೆ.ಆರ್. ಪುರಂ ಮಾಜಿ ಸಚಿವ ದಿವಂಗತ ಎ. ಕೃಷ್ಣಪ್ಪ ಅವರ ಅಳಿಯನಾಗಿದ್ದು, ಅವರ ಧರ್ಮಪತ್ನಿ ಪೂರ್ಣಿಮಾ ಸಹ ಶಾಸಕಿಯಾಗಿ ಕಾರ್ಯನಿರ್ವಹಿಸಿದ್ದಾರೆ.

ಒಳ್ಳೆಯ ಕುಟುಂಬದಿಂದ ಬಂದಿದ್ದು, ಶಿಕ್ಷಕರ ಬೇಡಿಕೆಗಳನ್ನುಈಡೇರಿಸುವ ನಿಟ್ಟಿನಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಕೆಲಸ ಮಾಡಲಿದ್ದಾರೆ. ಶಿಕ್ಷಕರು ಶ್ರೀನಿವಾಸ್ ಅವರನ್ನು ಗೆಲ್ಲಿಸಿದರೆ ಶಿಕ್ಷಣ ಇಲಾಖೆಯಲ್ಲಿನ ಶಿಕ್ಷಕರ ಬೇಡಿಕೆಗಳು ಭರವಸೆಗಳು ಈಡೇರಿಸಲು ಸರ್ಕಾರದ ಮುಖ್ಯಮಂತ್ರಿಗಳ ಬಳಿ ಚರ್ಚಿಸಿ ಅನುಕೂಲ ಕಲ್ಪಿಸಲು ಸಾಧ್ಯವಾಗುತ್ತದೆ. ಆಗ್ನೇಯ ವಿಧಾನ ಪರಿಷತ್ ಕ್ಷೇತ್ರದಲ್ಲಿ ಈಗಾಗಲೇ



ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಿ.ಟಿ. ಶ್ರೀನಿವಾಸ್ ಅವರ ಪರವಾದ ಅಲೆಯಿದ್ದು ಅವರು ಗೆಲ್ಲುವುದು ಶತಸಿದ್ಧ. ತಾಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ 500ಕ್ಕೂ ಹೆಚ್ಚು ಪ್ರೌಢಶಾಲಾ ಶಿಕ್ಷಕ ಮತದಾರರು, ತಾಲೂಕಿನಲ್ಲಿ ನನ್ನ ಗೌರವಕಾಪಾಡಲು ಸರ್ಕಾರದಲ್ಲಿ ನಿಮ್ಮ ಪರವಾಗಿ ಮಾತನಾಡುವ ಶಕ್ತಿಗಾಗಿ ಡಿ.ಟಿ. ಶ್ರೀನಿವಾಸ್ ಅವರನ್ನು ಬೆಂಬಲಿಸಬೇಕು.

ಈಗಾಗಲೇ ತಾಲೂಕಿನ ಎಲ್ಲಾ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ಪ್ರೌಢಶಾಲಾ ಶಿಕ್ಷಕ ಮತದಾರರಿಂದ ಮತಯಾಚನೆ ಮಾಡಲಾಗಿದೆ. ಸರ್ಕಾರದ ಪ್ರತಿನಿಧಿ ಕಾಂಗ್ರೆಸ್ ಪಕ್ಷದಿಂದ ಆಯ್ಕೆಯಾದರೆ ಶಿಕ್ಷಕರ ಎಲ್ಲಾ ಬೇಡಿಕೆಗಳು ಸಮಸ್ಯೆಗಳು ಬಗೆಹರಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗುತ್ತಾರೆ. ತಾಲೂಕಿನಲ್ಲಿ ಇತ್ತೀಚಿಗೆ ನಡೆದ ಲೋಕಸಭಾ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಅತ್ಯಂತ ಹೆಚ್ಚಿನ ಮತಗಳನ್ನು ನೀಡುವುದರ ಮೂಲಕ ಪಕ್ಷಕ್ಕೆ ಮೊದಲನೇ ಸ್ಥಾನ ನೀಡಿದ್ದು, ಉಳಿದ ಚುನಾವಣೆಗಳಲ್ಲಿಯೂ ಸಹ ನನ್ನ ಕೈ ಬಲಪಡಿಸುವ ನಂಬಿಕೆ ಇದೆ.

ಎರಡನೇ ಬಾರಿಗೆ ಶಾಸಕನಾಗಿ ಆಯ್ಕೆಯಾದಾಗ ನನಗೆ ಕಡಿಮೆ ಮತಗಳ ಅಂತರದಿಂದ ಗೆಲುವು ಸಾಧಿಸಬಹುದು, 10 ತಿಂಗಳಲ್ಲಿ ಅಭಿವೃದ್ಧಿಯನ್ನು ಗಮನಿಸಿದರೆ ಸರ್ಕಾರದಿಂದ ಹೆಚ್ಚಿನ ಅನುದಾನ ತಂದು ತಾಲೂಕಿನಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ.

ವಿಜಯಪುರದಿಂದ ತಾಲೂಕಿನ ಸಂಪಂಗೆರೆ ಗಡಿಯವರೆಗೂ ಹಾದು ಹೋಗುವ 6 ಪಥದ ರಸ್ತೆಗೆ ಸರ್ಕಾರ 2200 ಕೋಟಿ ರೂಗಳನ್ನು ಬಿಡುಗಡೆಗೊಳಿಸಿದ್ದು, ಮಾಲೂರು ಪಟ್ಟಣದಲ್ಲಿ ಹಾದು ಹೋಗುವ ರಸ್ತೆಯನ್ನು ಮೇಲ್ ಸೇತುವೆ ನಿರ್ಮಿಸಲು ಸರ್ಕಾರ 350 ಕೋಟಿ ರೂಗಳನ್ನು ಬಿಡುಗಡೆಗೊಳಿಸಿದೆ.

ತಾಲೂಕಿನ ಜನತೆಯ ಪರವಾಗಿ ಕೆಲಸ ಮಾಡಲು ಪ್ರೌಢಶಾಲಾ ಶಿಕ್ಷಕರು ಜೂನ್ 3 ರಂದು ನಡೆಯಲಿರುವ ಆಗ್ನೇಯ ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಅವರಿಗೆ ತಮ್ಮ ಮೊದಲನೇ ಪ್ರಶಸ್ತಿಯಾದ ಮತಗಳನ್ನು ನೀಡುವುದರ ಮೂಲಕ ಗೆಲ್ಲಿಸುವಂತೆ ಕೋರಿದರು

ಸಭೆಯಲ್ಲಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಸಿ.ಲಕ್ಷ್ಮೀನಾರಾಯಣ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಎಂ.ಜಿ. ಮಧುಸೂಧನ್, ಎಚ್.ಎಂ.ವಿಜಯನರಸಿಂಹ, ಕ.ಸಾ.ಪ.ತಾ ಅಧ್ಯಕ್ಷ ಹನುಮಂತಪ್ಪ, ಯೋಜನಾ ಪ್ರಾಧಿಕಾರ ಅಧ್ಯಕ್ಷ ನಹಿ ಉಲ್ಲಾ ಖಾನ್, ತಾಲೂಕು ಯಾದವ ಸಂಘದ ಅಧ್ಯಕ್ಷ ಗೋವಿಂದಪ್ಪ, ಮುಖಂಡರಾದ ಅಂಜನಪ್ಪ, ಲಿಂಗಾಪುರ ಕೃಷ್ಣಪ್ಪ (ಕಿಟ್ಟಿ), ಜಿಲ್ಲಾ ಯಾದವ ಸಂಘದ ಸಂಘಟನಾ ಕಾರ್ಯದರ್ಶಿ ರವಿಕುಮಾರ್, ಇನ್ನಿತರರು ಹಾಜರಿದ್ದರು.

ಸ್ಥಳೀಯ

ಇ-ಪೇಪರ್: www.munjaneevartheepaper.com

# ಉತ್ಪನ್ನಗಳಲ್ಲಿನ ಉತ್ಕೃಷ್ಟತೆಯ ಸಾರಾಂಶವಾಗಿರುವ ಹನಿಹನಿ ಶೋರೂಂಗೆ ಚಾಲನೆ

ಬೆಂಗಳೂರು: ಪ್ರೀಮಿಯಂ ಬೇಬಿ ಮತ್ತು ಪೇರೆಂಟಿಂಗ್ ಉತ್ಪನ್ನಗಳಲ್ಲಿನ ಉತ್ಕೃಷ್ಟತೆಯ ಸಾರಾಂಶವಾಗಿರುವ ಹನಿಹನಿ ಶೋರೂಂ, ಬೆಂಗಳೂರಿನ ಕೋರಮಂಗಲದಲ್ಲಿ ಅದ್ದೂರಿಯಾಗಿ ಉದ್ಘಾಟನೆಯಾಗಿದೆ. ತಮ್ಮ ಚಿಕ್ಕ ಮಕ್ಕಳಿಗಾಗಿ ಮಾತ್ರ ಉತ್ತಮವಾದುದನ್ನು ಬಯಸುವ ಪೋಷಕರು ಮತ್ತು ಕುಟುಂಬಗಳಿಗೆ ಅಸಾಮಾನ್ಯ ಅನುಭವ. ಕನ್ನಡದ ಹೆಸರಾಂತ ನಟಿ, ತೇಜಸ್ವಿನಿ ಪ್ರಕಾಶ್ ಅವರು ಈ ಮಳಿಗೆಗೆ ಚಾಲನೆ ನೀಡಿದರು.

ಗುಣಮಟ್ಟ ಮತ್ತು ಸಂಪೂರ್ಣ ಸಂಶೋಧನೆಗೆ ಅತ್ಯುತ್ತಮವಾದ ಸಮರ್ಪಣೆಯೊಂದಿಗೆ, ಹನಿಹನಿ ನವಜಾತ ಶಿಶುಗಳಿಗೆ ಸುರಕ್ಷತೆ, ಸೌಕರ್ಯ ಮತ್ತು ಶೈಲಿಯನ್ನು ಆದ್ಯತೆ ನೀಡಲು ಅಸಾಧಾರಣ ಬೇಬಿ ಕೋಟ್‌ಗಳು, ಬೇಬಿ ಸ್ಟ್ರಾಲರ್ಸ್, ಬೇಬಿ ಕ್ಲೋತ್‌ಗಳು ಮತ್ತು ಹೆಚ್ಚಿನದನ್ನು



ವಿನ್ಯಾಸಗೊಳಿಸುತ್ತದೆ. ಸೊಗಸಾದ ಸ್ಟ್ರಾರ್‌ಗಳು ಮತ್ತು ಸ್ನೇಹಶೀಲ ಕ್ರಿಬ್‌ಗಳಿಂದ ಸೊಗಸಾದ ಶುಶ್ರೂಷಾ ಕುರ್ಚಿಗಳು ಮತ್ತು ಅದರಾಚೆಗೆ, ಬ್ರ್ಯಾಂಡ್ ಆಧುನಿಕ ಪೋಷಕರ ಅಗತ್ಯಗಳಿಗೆ ಅನುಗುಣವಾಗಿ ತಲ್ಲೀನಗೊಳಿಸುವ ಶಾಪಿಂಗ್ ಅನುಭವವನ್ನು ಖಾತ್ರಿಗೊಳಿಸುತ್ತದೆ.

ಬೆಂಗಳೂರು ಮಳಿಗೆಯ ಪ್ರಾರಂಭದ ಸಂದರ್ಭದಲ್ಲಿ ಹನಿಹನಿ ಯ ಸಂಸ್ಥಾಪಕರಾದ ವಿಶಾಲ್ ಮಿತ್ತಲ್ ಅವರು ಮಾತನಾಡಿ, ಕುಟುಂಬಗಳಿಗೆ ಉನ್ನತ–ಶ್ರೇಣಿಯ ಉತ್ಪನ್ನಗಳು ಮತ್ತು ಸಾಟಿಯಿಲ್ಲದ ಶಾಪಿಂಗ್ ಅನುಭವಗಳಿಗೆ ಪ್ರವೇಶವನ್ನು ಒದಗಿಸುವ ಬ್ರ್ಯಾಂಡ್‌ನ ಬದ್ಧತೆಯನ್ನು ಪ್ರತಿಧ್ವನಿಸಿದರು.

ಹನಿಹನಿಯಲ್ಲಿ ನಮ್ಮ ಪ್ರಯಾಣವು ಸರಳವಾದ ಆದರೆ ಆಳವಾದ ನಂಬಿಕೆಯೊಂದಿಗೆ ಪ್ರಾರಂಭವಾಯಿತು – ಪ್ರತಿ ತಾಯಿ ಮತ್ತು ಮಗು ಜೀವನದಲ್ಲಿ ಉತ್ತಮ ಆರಂಭಕ್ಕೆ ಅರ್ಹವಾಗಿದೆ. ಬೆಂಗಳೂರಿನಲ್ಲಿ ನಮ್ಮ ಹೊಸ ಮಳಿಗೆಯನ್ನು ತೆರೆಯುವುದರೊಂದಿಗೆ, ಪ್ರೀಮಿಯಂ ಬೇಬಿ ಕೋಟ್‌ಗಳು, ಸ್ಟ್ರಾಲರ್‌ಗಳು, ಡೈಪರ್ ಬದಲಾಯಿಸುವ ಸ್ಟೇಷನ್‌ಗಳು, ರಾಕಿಂಗ್ ನರ್ಸಿಂಗ್ ಚೇಸ್‌ಗಳು, ನವಜಾತ ಶಿಶುಗಳಿಗೆ ಆರಾಮದಾಯಕವಾದ ಬಟ್ಟೆಗಳು ಮತ್ತು ನಮ್ಮ ಪ್ರಯತ್ನವಿಲ್ಲದ ಪೋಷಕರಿಗೆ ಅಗತ್ಯವಿರುವ ಎಲ್ಲವನ್ನೂ ಪೋಷಕರಿಗೆ ಗುಣಮಟ್ಟ, ಸುರಕ್ಷತೆ, ಸೌಕರ್ಯ ಮತ್ತು ಶೈಲಿಗೆ ಬದ್ಧತೆಯೊಂದಿಗೆ' ನೀಡಲು ನಾವು ಹೆಮ್ಮೆಪಡುತ್ತೇವೆ." ಎಂದು ಹೇಳಿದರು.

ಗುಣಮಟ್ಟ ಮತ್ತು ಸಂಪೂರ್ಣ ಸಂಶೋಧನೆಗೆ ಅತ್ಯುತ್ತಮವಾದ ಸಮರ್ಪಣೆಯೊಂದಿಗೆ, ಹನಿಹನಿ ನವಜಾತ ಶಿಶುಗಳಿಗೆ ಸುರಕ್ಷತೆ, ಸೌಕರ್ಯ ಮತ್ತು ಶೈಲಿಯನ್ನು ಆದ್ಯತೆ ನೀಡಲು ಅಸಾಧಾರಣ ಬೇಬಿ ಕೋಟ್‌ಗಳು, ಬೇಬಿ ಸ್ಟ್ರಾಲರ್ಸ್, ಬೇಬಿ ಕ್ಲೋತ್‌ಗಳು ಮತ್ತು ಹೆಚ್ಚಿನದನ್ನು ವಿನ್ಯಾಸಗೊಳಿಸುತ್ತದೆ. ಬ್ರ್ಯಾಂಡ್ ಆಧುನಿಕ ಪೋಷಕರ ಅಗತ್ಯಗಳಿಗೆ ಅನುಗುಣವಾಗಿ ತಲ್ಲೀನಗೊಳಿಸುವ ಶಾಪಿಂಗ್ ಅನುಭವವನ್ನು ಖಾತ್ರಿಗೊಳಿಸುತ್ತದೆ.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjaneevartheepaper.com
20 MONDAY MAY 2024
20 ಸೋಮವಾರ ಮೇ 2024

# ಬರ ಪರಿಹಾರ ಹಣ ಬಿಡುಗಡೆ: ಜಿಲ್ಲಾಧಿಕಾರಿ ಮಿಶ್ರಾ

## ಜಿಲ್ಲೆಯ 36,944 ರೈತರ ಖಾತೆಗೆ ಒಟ್ಟು 41.40 ಕೋಟಿ ರೂ. ಜಮೆ | ಜಿಲ್ಲೆಯ ಎಲ್ಲಾ 05 ತಾಲ್ಲೂಕುಗಳನ್ನು ಬರಪೀಡಿತ

ಬಳ್ಳಾರಿ: ಜಿಲ್ಲೆಯನ್ನು ಬರಗಾಲ ಬರಪೀಡಿತ ಎಂದು ಘೋಷಣೆ ಮಾಡಿದ ಹಿನ್ನೆಲೆಯಲ್ಲಿ ಜಿಲ್ಲೆಯ 36,944 ರೈತರ ಖಾತೆಗೆ ಎರಡು ಹಂತಗಳಲ್ಲಿ ಡಿಬಿಟಿ ಮೂಲಕ ಒಟ್ಟು 41.40 ಕೋಟಿ ರೂ.ಗಳನ್ನು ಜಮೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ತಿಳಿಸಿದ್ದಾರೆ.

2023-24 ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ ಎಲ್ಲಾ 05 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಸರ್ಕಾವು ಘೋಷಣೆ ಮಾಡಿದೆ.

ಮುಂಗಾರು ಹಂಗಾಮಿನಲ್ಲಿ ಹಾನಿಯಾಗಿರುವ ಬೆಳೆಗಳಿಗೆ ಬೆಳೆ ಸಮೀಕ್ಷೆ ದತ್ತಾಂಶದ ಮಾಹಿತಿಯ ಆಧಾರದ ಮೇರೆಗೆ ಫ್ರೂಟ್ಸ್ ಐಡಿ ಹೊಂದಿರುವ, ಪಹಣಿ ಜೋಡಣೆಯಾಗಿರುವ ರೈತರಿಗೆ ಡಿಬಿಟಿ ಮೂಲಕ ಎನ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಈಗಾಗಲೇ 9 ಕಂತುಗಳಲ್ಲಿ ಮೊದಲನೆ ಕಂತಾಗಿ ಗರಿಷ್ಠ ರೂ.2000 ರವರೆಗೆ ಒಟ್ಟು 36,944 ರೈತರಿಗೆ ರೂ.7.26 ಕೊಟಿ ಪರಿಹಾರ ಬೆಳೆ ಹಾನಿ ಪರಿಹಾರವನ್ನು ವಿತರಿಸಲಾಗಿದೆ.

### ಜಿಲ್ಲಾ, ತಾಲ್ಲೂಕುವಾರು ಸಹಾಯವಾಣಿ ಸಂಖ್ಯೆ

ಜಿಲ್ಲಾಧಿಕಾರಿಗಳ ಕಾರ್ಯಾಲಯದ ದೂ.1077 ಅಥವಾ 08392-277100, ಬಳ್ಳಾರಿ ತಾಲ್ಲೂಕು ತಹಶೀಲ್ದಾರರ ಕಚೇರಿಯ ದೂ.08392-297472, ಸಂಡೂರು ತಹಶೀಲ್ದಾರರ ಕಚೇರಿಯ ದೂ.08395-260241, ಸಿರುಗುಪ್ಪ ತಹಶೀಲ್ದಾರರ ಕಚೇರಿಯ ದೂ.08396-220238, ಕುರುಗೋಡು ತಹಶೀಲ್ದಾರರ ಕಚೇರಿಯ ದೂ.08393-200014, ಕಂಪ್ಲಿ ಕುರುಗೋಡು ತಹಶೀಲ್ದಾರರ ಕಚೇರಿಯ ದೂ.08394-295554 ಗೆ ಸಂಪರ್ಕಿಸಬಹುದು.

ಎರಡನೇ ಹಂತದಲ್ಲಿ ಜಿಲ್ಲೆಯ ಅರ್ಹ 31351 ರೈತರುಗಳಿಗೆ ಎನ್‌ಡಿಆರ್‌ಎಫ್ ಮಾರ್ಗಸೂಚಿನ್ವಯ ರೂ.34.03 ಕೋಟಿ ಪರಿಹಾರವನ್ನು (ಇನ್ ಪುಟ್ ಸಬ್ಸಿಡಿ) ವಿತರಣೆ ಮಾಡಲು ಅನುಮೋದನೆ ನೀಡಿ, ಡಿಬಿಟಿ ಮೂಲಕ ರೈತರ ಖಾತೆಗೆ ಜಮೆ ಮಾಡಲಾಗಿರುತ್ತದೆ. ಇಲ್ಲಿಯವರೆಗೆ ಜಿಲ್ಲೆಯ 2 ಹಂತದಲ್ಲಿ ಒಟ್ಟು 36944 ರೈತರಿಗೆ ರೂ.41.30 ಕೋಟಿಗಳನ್ನು ರೈತರ ಖಾತೆಗೆ ಜಮೆ ಮಾಡಲಾಗಿದೆ ಎಂದು ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಬೆಳೆ ಹಾನಿ ಪರಿಹಾರ ಹಣ ಖಾತೆಗೆ ಜಮಾ ಆಗದೇ ಇರುವ ಬಗ್ಗೆ ದೂರುಗಳನ್ನು ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಯನ್ನು ಪಡೆದುಕೊಳ್ಳಲು ಸಾರ್ವಜನಿಕರಿಗೆ ಅನುಕೂಲವಾಗುವಂತೆ, ಜಿಲ್ಲಾ ಮತ್ತು ತಾಲ್ಲೂಕುವಾರು ಸಹಾಯವಾಣಿ ತೆರೆಯಲಾಗಿದೆ. ದೂರವಾಣಿ ಸಂಖ್ಯೆಗಳಿಗೆ ಸಂಪರ್ಕಿಸಿ ಪರಿಹಾರ ಕಂಡುಕೊಳ್ಳಬಹುದು.

ಬೆಳೆ ಹಾನಿ ಪರಿಹಾರ ಪಡೆದುಕೊಳ್ಳಲು ಫ್ರೂಟ್ಸ್ ಐಡಿಗೆ ಪಹಣಿ ಜೋಡಣೆ ಕಡ್ಡಾಯವಾಗಿರುವುದರಿಂದ ಇದುವರೆಗೂ ಫ್ರೂಟ್ಸ್ ಐಡಿ ನೋಂದಣಿ ಮಾಡಿಕೊಳ್ಳಲ್ಲದ ರೈತರು ತಮ್ಮ ಆಧಾರ್, ಪಹಣಿ ಹಾಗೂ ಬ್ಯಾಂಕ್ ಪಾಸ್‌ಬುಕ್ ದಾಖಲೆಗಳನ್ನು ತೆಗೆದುಕೊಂಡು ಹತ್ತಿರದ ಕಂದಾಯ, ಕೃಷಿ ಅಥವಾ ತೋಟಗಾರಿಕೆ ಇಲಾಖೆಗಳ ಕಚೇರಿಗಳಿಗೆ ಭೇಟಿ ನೀಡಿ ನೋಂದಣಿ ಮಾಡಿಕೊಳ್ಳಬೇಕು. ಇಲ್ಲವಾದಲ್ಲಿ ಅಂತಹ ರೈತರು ಬೆಳೆ ಪರಿಹಾರ ಹಣ ಪಡೆದುಕೊಳ್ಳಲು ಅರ್ಹರಾಗುವುದಿಲ್ಲ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# 5 ಕೋಟಿ ಸಸಿಗಳಲ್ಲಿ ಬದುಕುಳಿದಿದ್ದೆಷ್ಟು...?



ಬೆಂಗಳೂರು: ಕಳೆದ ವರ್ಷ ಜುಲೈನಲ್ಲಿ ನಡೆದ ವನಮಹೋತ್ಸವದ ಸಂದರ್ಭದಲ್ಲಿ ಅರಣ್ಯ ಇಲಾಖೆಯಿಂದ ನಡೆಲಾದ 5 ಕೋಟಿ ಸಸಿಗಳ ಪೈಕಿ ಎಷ್ಟು ಬದುಕುಳಿದಿವೆ ಎಂಬ ಬಗ್ಗೆ ಆಡಿಟ್ ವರದಿಯನ್ನು 3 ತಿಂಗಳೊಳಗಾಗಿ ಸಲ್ಲಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಆದೇಶ ನೀಡಿದ್ದಾರೆ.

ಬೆಂಗಳೂರಿನ ಅರಣ್ಯ ಭವನದಲ್ಲಿಂದು ನಡೆದ ಅರಣ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಪ್ರಸಕ್ತ ಸಾಲಿನಲ್ಲಿ ಎಷ್ಟು ಸಸಿಗಳನ್ನು ನೆಡಲು ಯೋಜನೆ ರೂಪಿಸಲಾಗಿದೆ. ಇಲಾಖೆಯ ನರ್ಸರಿಗಳಲ್ಲಿ ಎಷ್ಟು ಎತ್ತರದ ಸಸಿ ಬೆಳೆಸಲಾಗಿದೆ ಎಂಬ ಬಗ್ಗೆ 7 ದಿನಗಳೊಳಗಾಗಿ ಮಾಹಿತಿ ನೀಡುವಂತೆಯೂ ತಿಳಿಸಿದರು.

ವನ್ಯಜೀವಿಗಳ ಅಂಗಾಂಗಗಳಿಂದ ತಯಾರಿಸಿದ ಉತ್ಪನ್ನಗಳನ್ನು, ಟ್ರೋಫಿ, ಫಲಕಗಳನ್ನು ಸರ್ಕಾರಕ್ಕೆ ಮರಳಿಸಲು ನೀಡಲಾಗದ್ದ ಗಡುವು ಏಪ್ರಿಲ್ 9ರಂದು ಮುಕ್ತಾಯವಾಗಿದ್ದು, ಕೆಲವರು ಹೈಕೋರ್ಟ್ ನಲ್ಲಿ ತಡೆಯಾಜ್ಞೆ ತಂದ ಹಿನ್ನೆಲೆಯಲ್ಲಿ ಉಂಟಾಗಿರುವ ಗೊಂದಲದಿಂದಾಗಿ ಮತ್ತೆ 2-3 ತಿಂಗಳುಗಳ ಕಾಲ ಹೆಚ್ಚಿನ ಕಾಲಾವಕಾಶ ನೀಡುವಂತೆ ಮನವಿ ಮಾಡಿದ್ದಾರೆ. ನ್ಯಾಯಾಲಯದ ತೀರ್ಪು ಬಂದ ಬಳಿಕ ಈ ಬಗ್ಗೆ ಕಾನೂನು ಇಲಾಖೆಯ ಸಲಹೆ ಪಡೆದು ನಿರ್ಧರಿಸೋಣ ಎಂದರು.

ಅರಣ್ಯ ಮತ್ತು ಪಟ್ಟಾ ಭೂಮಿಯಲ್ಲಿ ಮರಗಳ ಅಕ್ರಮ ಕಡಿತಲೆ ಆಗುತ್ತಿರುವ ಬಗ್ಗೆ ಸತತ ದೂರುಗಳು ಬರುತ್ತಿದ್ದು, ನಿರ್ಲಕ್ಷ್ಯ ವಹಿಸುವ ಅರಣ್ಯ ಇಲಾಖೆ ಸಿಬ್ಬಂದಿ ಮತ್ತು ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವ ಎಚ್ಚರಿಕೆಯನ್ನು ಅರಣ್ಯ ಸಚಿವರು ನೀಡಿದರು. ಕೊಡಗು ಜಿಲ್ಲೆಯ ವೀರಾಜಪೇಟೆಯ ಬಳಿ ಸಾವಿರಾರು ಮರಗಳನ್ನು ಅಕ್ರಮವಾಗಿ ಕಡಿಯಲಾಗಿದೆ ಎಂಬ ದೂರಿನ ಕುರಿತಂತೆ ಎ.ಪಿ.ಸಿ.ಸಿ.ಎಫ್. ದರ್ಜೆಯ ಅಧಿಕಾರಿಯಿಂದ ಪರಿಶೀಲನೆ ನಡೆಸಿ ವರದಿ ಸಲ್ಲಿಸುವಂತೆ ಸೂಚಿಸಿದರು.

ಅರಣ್ಯ ಒತ್ತುವರಿ ಸಹ ಅವ್ಯಾಹತವಾಗಿ ನಡೆಯುತ್ತಿದ್ದು, ನಿರಂತರವಾಗಿ ಉಪಗ್ರಹ ಚಿತ್ರ ಪರಿಶೀಲಿಸಿ ಮರ ಕಡದು, ಅರಣ್ಯ ಭೂಮಿ ಒತ್ತುವರಿ ಮಾಡುವವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ವಹಿಸುವಂತೆ ಹಾಗೂ ಒಂದೊಮ್ಮೆ ಅರಣ್ಯ ಇಲಾಖೆಯೇ ಪಟ್ಟಾ ಜಮೀನಿನ ಸ್ವಾಧೀನದಲ್ಲಿದ್ದರೆ ಅಂತಹ ಜಮೀನುಗಳನ್ನು ನಿಯಮ ಮತ್ತು ಸರ್ಕಾರದ ಆದೇಶದ ರೀತ್ಯ ಇತ್ಯರ್ಥಪಡಿಸಿ, ಜನರಿಗೆ ಆಗುತ್ತಿರುವ ಕಿರುಕುಳ ತಪ್ಪಿಸುವಂತೆ ಅರಣ್ಯ ಸಚಿವರು ಸೂಚಿಸಿದರು.

ಅರಣ್ಯ ಸ್ವರೂಪ ಇರುವ ಗೋಮಾಳ ರಕ್ಷಿಸಲು ಎನ್.ಜಿ.ಟಿ. ಆದೇಶ ನೀಡಿದ್ದು, ಈ ಸಂಬಂಧ ಸಮೀಕ್ಷೆ ನಡೆಸಿ, ಕಂದಾಯ ಇಲಾಖೆಯ ಸಹಯೋಗದಲ್ಲಿ ಅರಣ್ಯ ಸ್ವರೂಪದ ಸರ್ಕಾರಿ ಭೂಮಿಗಳ ಸಂರಕ್ಷಣೆಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

# ಶ್ರೀ ಲಕ್ಷ್ಮೀ ವೆಂಕಟರಮಣ ಸ್ವಾಮಿ ಬ್ರಹ್ಮ ರಥೋತ್ಸವ

ಬಾಗೇಪಲ್ಲಿ: ಮೇ 23 ರಂದು ನಡೆಯಲಿರುವ ಗಡಿದಂ ಶ್ರೀ ಲಕ್ಷ್ಮೀ ವೆಂಕಟರಮಣಸ್ವಾಮಿ ಬ್ರಹ್ಮ ರಥೋತ್ಸವ ಕಾರ್ಯಕ್ರಮದಲ್ಲಿ ಪ್ರತಿಯೊಬ್ಬರು ಭಾಗಹಿಸಿ ಯಶಸ್ವಿಗೊಳಿಸಬೇಕೆಂದು ತಹಶೀಲ್ದಾರ್ ಪ್ರಶಾಂತ್ ಕೆ ಪಾಟೀಲ ತಿಳಿಸಿದ್ದಾರೆ.

ಪಟ್ಟಣದ ತಹಶೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ನಡೆದ ಗಡಿದಂ ಬ್ರಹ್ಮ ರಥೋತ್ಸವ ಸಿದ್ಧತೆ ಕುರಿತು ಪೂರ್ವ ಸಭೆ ಹಾಗೂ ಸುಂಕ ವಸೂಲಿ ಹರಾಜು ಸಭೆ ನಡೆಸಿ ಮಾತನಾಡಿ, ಚಿಕ್ಕ ತಿರುಪತಿ ಖ್ಯಾತಿಗೆ ಪ್ರಸಿದ್ದಿಗೊಂಡಿರುವ ಗಡಿದಂ ಲಕ್ಷ್ಮೀ ವೆಂಕರಮಣಸ್ವಾಮಿ ಬ್ರಹ್ಮ ರಥೋತ್ಸವ ಈ ಬಾರಿ ಆದ್ದೂರಿಯಾಗಿ ನಡೆಯಲಿದ್ದು, ಮೇ 17 ರಿಂದ 26 ರವರೆಗೆ ಹಿಂದೂ ಧಾರ್ಮಿಕ ಸಂಸ್ಥೆ ಹಾಗೂ ದತ್ತಿ ಇಲಾಖೆ ವತಿಯಿಂದ ವಿವಿಧ ಬಗೆಯ ಕೈಂಕರ್ಯಗಳು, ಅಭಿಷೇಕ, ಕಲ್ಯಾಣೋತ್ಸವ, ಸಿಂಹ ವಾಹನ, ವಿಶೇಷ ಪೂಜೆಗಳು ನೆರವೇರಿಸಲಿದ್ದೇವೆ. ಮೇ 23 ರಂದು ಮದ್ಯಾಹ್ನ 12ಗಂಟೆಗೆ ಬ್ರಹ್ಮ ರಥೋತ್ಸವಕ್ಕೆ ಚಾಲನೆ ನೀಡಲಿದ್ದೇವೆ. ಬ್ರಹ್ಮ ರಥೋತ್ಸವಕ್ಕೆ ಆಗಮಿಸುವ ಭಕ್ತಾಧಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಇತರೆ ಮೂಲ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.

ಗಡಿದಂ ಲಕ್ಷ್ಮೀ ವೆಂಕಟರಮಣ ಸ್ವಾಮಿಯ ದರ್ಶನಕ್ಕೆ ಪ್ರಪ್ರಥಮ ಭಾರಿಗೆ ವಿಶೇಷ ದರ್ಶನಕ್ಕೆ 500 ರೂ, ಸಾಮಾನ್ಯ ದರ್ಶನಕ್ಕೆ 100 ರೂ ನಿಗಧಿಪಡಿಸಿ ಪ್ರತ್ಯೇಕ ದರ್ಶನ ವ್ಯವಸ್ಥೆಗೆ ಅವಕಾಶ ಕಲ್ಪಿಸಿ ಅದಾಯವನ್ನು ಹೆಚ್ಚಿಸುವುದರ ಜೊತೆಗೆ ದರ್ಶನ ವ್ಯವಸ್ಥೆಯಲ್ಲಿ ಕಟ್ಟು ನಿಟ್ಟಿನ ಹಲವು ಬದಲಾವಣೆಗಳನ್ನು ತಂದು ಬಂದಂತಹ ಆದಾಯವನ್ನು ಮೂಲ ಸೌಕರ್ಯಗಳ ಅಭಿವೃದ್ದಿಗೆ ಬಳಸುವಂತೆ ಸುತ್ತೋಲೆ ಹೊರಡಿಸಿದ್ದಾರೆ.

2022 ಮತ್ತು 23 ನೇ ಸಾಲಿನಲ್ಲಿ ನಡೆದ ಬ್ರಹ್ಮ ರಥೋತ್ಸವ ಜಾತ್ರೆಯ ಸುಂಕ ವಸೂಲಿ ಹರಾಜು ಕೇವಲ 50 ಸಾವಿರ ರೂಗಳಿಗೆ ಸೀಮಿತಗೊಂಡಿತ್ತು, 2024 ನೇ ಸಾಲಿನ ಜಾತ್ರೆ ಸುಂಕ ಹರಾಜು ಪ್ರಕ್ರಿಯೆಯಲ್ಲಿ ತಹಶೀಲ್ದಾರ್ ಪ್ರಶಾಂತ್ ಕೆ ಪಾಟೀಲ ಹಲವು ಬದಲಾವಣೆ ಮಾಡಿ ನಾಗರೀಕರ ಸಮ್ಮುಖದಲ್ಲಿ ಬಹಿರಂಗ ಹರಾಜು ನಡೆಸಿದ್ದು, 1 ಲಕ್ಷ 80 ಸಾವಿರ ರೂಗಳಿಗೆ ಹರಾಜುನಲ್ಲಿ ಕೂಗಿಕೊಂಡಿದ್ದು, ದೇವಾಲಯದ ಅದಾಯವನ್ನು ಮೂರು ರಿಂದ ನಾಲ್ಕು ಪಟ್ಟು ಹೆಚ್ಚಿಸಿದ್ದಾರೆ. ಗಡಿದಂ ಲಕ್ಷ್ಮೀ ವೆಂಕಟರಮಣ ಸ್ವಾಮಿಯ ದರ್ಶನಕ್ಕೆ ಪ್ರಪ್ರಥಮ ಭಾರಿಗೆ ಗಡಿದಂ ಲಕ್ಷ್ಮೀ ವೆಂಕಟರಮಣ ಸ್ವಾಮಿಯ ದರ್ಶನಕ್ಕೆ ಪ್ರಪ್ರಥಮ ಭಾರಿಗೆ ವಿಶೇಷ ದರ್ಶನಕ್ಕೆ 500 ರೂ, ಸಾಮಾನ್ಯ ದರ್ಶನಕ್ಕೆ 100 ರೂ ನಿಗಧಿಪಡಿಸಿ ಪ್ರತ್ಯೇಕ ದರ್ಶನ ವ್ಯವಸ್ಥೆಗೆ ಅವಕಾಶ ಕಲ್ಪಿಸಿ ಅದಾಯವನ್ನು ಹೆಚ್ಚಿಸುವುದರ ಜೊತೆಗೆ ದರ್ಶನ ವ್ಯವಸ್ಥೆಯಲ್ಲಿ ಕಟ್ಟು ನಿಟ್ಟಿನ ಹಲವು ಬದಲಾವಣೆಗಳನ್ನು ತಂದು ಬಂದಂತಹ ಆದಾಯವನ್ನು ಮೂಲ ಸೌಕರ್ಯಗಳ ಅಭಿವೃದ್ದಿಗೆ ಬಳಸುವಂತೆ ಸುತ್ತೋಲೆ ಹೊರಡಿಸಿದ್ದಾರೆ.

ವಿಶೇಷ ದರ್ಶನಕ್ಕೆ 500 ರೂ, ಸಾಮಾನ್ಯ ದರ್ಶನಕ್ಕೆ 100 ರೂ ನಿಗಧಿಪಡಿಸಿ ಪ್ರತ್ಯೇಕ ದರ್ಶನ ವ್ಯವಸ್ಥೆಗೆ ಅವಕಾಶ ಕಲ್ಪಿಸಿ ಅದಾಯವನ್ನು ಹೆಚ್ಚಿಸುವುದರ ಜೊತೆಗೆ ದರ್ಶನ ವ್ಯವಸ್ಥೆಯಲ್ಲಿ ಕಟ್ಟು ನಿಟ್ಟಿನ ಹಲವು ಬದಲಾವಣೆಗಳನ್ನು ತಂದು ಬಂದಂತಹ ಆದಾಯವನ್ನು ಮೂಲ ಸೌಕರ್ಯಗಳ ಅಭಿವೃದ್ದಿಗೆ ಬಳಸುವಂತೆ ಸುತ್ತೋಲೆ ಹೊರಡಿಸಿದ್ದಾರೆ.

ಈ ಸಂದರ್ಭದಲ್ಲಿ ರಾಜಸ್ವ ನಿರೀಕ್ಷಕ ವೇಣು ಗೋಪಾಲ, ಗ್ರಾಮ ಲೆಕ್ಕಾಧಿಕಾರಿ ಲಕ್ಷ್ಮಣ, ಮುಖಂಡರಾದ ಗಡಿದಂ ಶಿವರಾಮರೆಡ್ಡಿ, ಧೀರಜ್, ವಿನೋಧ್, ಸತ್ಯಶೇಖರ್, ನರೇಶ್, ರವಿ ಕುಮಾರ್, ಸುಭಾನ್, ಲೋಕೇಶ್, ಮಂಜುನಾಥ, ಗೌತಮ್, ದೇವಾಲಯದ ಪೇಚಕಾರ್ ಶ್ರೀರಾಮರೆಡ್ಡಿ, ಸಿಬ್ಬಂದಿ ಶ್ರೀನಿವಾಸ್, ಕಾವ್ಯ ಮತ್ತಿತರರು ಇದ್ದರು.

# ದಕ್ಷಿಣ ಕರ್ನಾಟಕದಲ್ಲಿ ಮೈತ್ರಿ ಕೂಟದ ಶಕ್ತಿ ದೊಡ್ಡದಾಗಿದೆ: ಡಾ. ಸುಧಾಕರ್

ನೆಲಮಂಗಲ: ವಿಧಾನಸಭಾ ಕ್ಷೇತ್ರದ ಎನ್‌ಡಿಎ ಮೈತ್ರಿ ಕೂಟದ ನಾಯಕರು ಹಾಗೂ ಕಾರ್ಯಕರ್ತರಿಗೆ ಅಭಿನಂದನಾ ಸಮಾರಂಭವನ್ನು ಆಯೋಜಿಸಲಾಗಿತ್ತು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಎನ್‌ಡಿಎ ಮೈತ್ರಿ ಕೂಟದ ಅಭ್ಯರ್ಥಿ ಡಾ.ಕೆ ಸುಧಾಕರ್ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದರು.



ನಗರದ ಬಸವಣ್ಣ ದೇವರ ಮಠದ ಭವನದಲ್ಲಿ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದ ಅವರು ಎನ್‌ಡಿಎ ಮೈತ್ರಿ ಕೂಟದ ಅಭ್ಯರ್ಥಿ ಡಾ.ಕೆ ಸುಧಾಕರ್ ಮಾತನಾಡಿ ನನಗೆ ಆಂದ್ರಪ್ರದೇಶದ ರಾಜಮಂಡ್ರಿಗೆ ಚುನಾವಣಾ ಉಸ್ತುವಾರಿಗೆ ನೇಮಕ ಮಾಡಿದ್ರು ಈಗಾಗಿ ಕೃತಜ್ಞತೆಯ ಸಭೆಯನ್ನು ಮುಂದೂಡಲಾಗಿತ್ತು. ಚುನಾವಣೆ ಮುಗಿಸಿಕೊಂಡು ಬಂದ ಬಳಿಕ ನನ್ನ ಕಾರ್ಯಕರ್ತರಿಗೆ ಅಭಿನಂದನೆ ತಿಳಿಸಲು ಈ ಸಭೆ ಆಯೋಜಿಸಲಾಗಿದೆ ಎಂದರು.

ಚುನಾವಣೆಯಲ್ಲಿ ಎರಡು ಪಕ್ಷಗಳ ಮುಖಂಡರು ಬಹಳಷ್ಟು ಕ್ರಿಯಾಶೀಲವಾಗಿ ಒಳ್ಳೆ ರೀತಿಯಲ್ಲಿ ಕೆಲಸ ಮಾಡಿದ್ದೀರ. ನಿಮಗೆ ನಾನು ಹೃದಯಸ್ಪರ್ಶಿ ಅಭಿನಂದನೆಯನ್ನ ಈ ವೇದಿಕೆ ಮುಖಾಂತರ ಮಾಜಿ ಪ್ರಧಾನಿ ದೇವೇಗೌಡರ ಜನ್ಮದಿನಾಚರಣೆಯಂದು ಸಲ್ಲಿಸುತ್ತಿದ್ದೇನೆ. ಇಲ್ಲಿಂದಲೇ ಮಾಜಿ ಪ್ರಧಾನಿಗಳಿಗೆ ಹರಸಿ ಹಾರೈಸೋಣ. ಕಳೆದ ಅರವತ್ತು ವರ್ಷಗಳಲ್ಲಿ ದೇವೇಗೌಡರು ದೇಶಕ್ಕೆ ಮಾಡಿದ ಸೇವೆ ಮರೆಯೋದಕ್ಕೆ ಆಗಲ್ಲ. ನೀರಾವರಿ ಕ್ಷೇತ್ರದಲ್ಲಿ ಅವರು ಮಾಡಿರುವ ಸೇವೆ ಅನುಕರಣೀಯ ಎಂದರು.

ದಕ್ಷಿಣ ಕರ್ನಾಟಕ ಭಾಗದಲ್ಲಿ ಮೈತ್ರಿ ಕೂಟ ದೊಡ್ಡ ಶಕ್ತಿಯಾಗಿದೆ. ಎಂಪಿ ಎಂಎಲ್‌ಎ ಚುನಾವಣೆ ಬಿಟ್ಟು ಮತ್ತೆಲ್ಲ ಚುನಾವಣೆಗಳು ಕಾರ್ಯಕರ್ತರ ಆಧಾರದ ಮೇಲೆ ನಡೆಯುವುದು. ಮುಂದೆ ನಡೆಯುವ ಪದವಿಧರರ ಕ್ಷೇತ್ರದ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿ ಅ.ದೇವೇಗೌಡರನ್ನ ಗೆಲ್ಲಿಸುವ ಕೆಲಸ ಮಾಡೋಣ.

ಗ್ರಾಮ ಪಂಚಾಯ್ತಿ ಮಟ್ಟದ ಮುಖಂಡರನ್ನ ಫೋನ್ ಮುಖಾಂತರ ಸಂಪರ್ಕ ಮಾಡಿ ಚುನಾವಣೆ ಹೇಗೆ ನಡೆದಿದೆ ಎನ್ನುವ ಮಾಹಿತಿ ಸಂಗ್ರಹ ಮಾಡಿದ್ದೇನೆ, ಮುಂದೆಯು ಮಾಡುತ್ತೇನೆ. ಯಾರು ಏನೆ ಹೇಳಲಿ, ಯಾವುದೇ ಸಮೀಕ್ಷೆಗಳು ನಡೆದರು ಕೊನೆಗೆ ಇವಿಎಂ ಮಿಷನ್‌ನಲ್ಲಿ ಅಡಕವಾಗಿರುವ ಫಲಿತಾಂಶವೇ ಕೊನೆ.

ಬಿಜೆಪಿ ಜೆಡಿಎಸ್ ಮೈತ್ರಿಯಿಂದ ಕಾಂಗ್ರೆಸ್ ನೆಲ ಕಚ್ಚುವುದು ಖಚಿತ, ಕರ್ನಾಟಕದಲ್ಲಿ ಕಾಂಗ್ರೆಸ್ ಗ್ಯಾರಂಟಿಗಳನ್ನ ನೆಚ್ಚಿಕೊಂಡಿದ್ದಾರೆ, ಆಂದ್ರ ಪ್ರದೇಶದಲ್ಲಿ ಇನ್ನೂ ಹೆಚ್ಚಿನ ಮೌಲ್ಯದ ಗ್ಯಾರಂಟಿ ಕೊಟ್ಟಿದ್ದಾರೆ ಆದ್ರೆ ಜನ ತಾತ್ಕಾಲಿಕ ಗ್ಯಾರಂಟಿಗಳನ್ನ ಬಿಟ್ಟು ಶಾಶ್ವತ ಯೋಜನೆಗಳ ಬಗ್ಗೆ ಒಲವು ತೋರಿದ್ದಾರೆ ಎಂದರು.

ಮಾಜಿ ಶಾಸಕ ಡಾ. ಕೆ ಶ್ರೀನಿವಾಸಮೀರ್ತಿ ಮಾತನಾಡಿ ತಡವಾದರು ಸುಧಾಕರ್ ಅವರು ಬಂದು ಅಭಿನಂದನೆ ಸಲ್ಲಿಸಿದ್ದಾರೆ, ಅವರಿಗೆ ನಮ್ಮ ಕ್ಷೇತ್ರದ ಮತದಾರರ ಪರವಾಗಿ ಅಭಿನಂದನೆ ಸಲ್ಲಿಸುತ್ತೇನೆ ಎಂದು ಹೇಳಿದರು. ಅಲ್ಲದೆ ನಮ್ಮ ಸ್ಥಳೀಯ ವೈಮನಸ್ಯ ಏನೆ ಇದ್ರು ಗ್ರಾಮ ಪಂಚಾಯ್ತಿ ಮಟ್ಟದಿಂದ ನಾವು ಎಲ್ಲವನ್ನೂ ಸರಿಪಡಿಸಿಕೊಂಡು ಪಂಚಾಯ್ತಿ ಚುನಾವಣೆ ರೀತಿಯಲ್ಲಿ ಕೆಲಸ ಮಾಡಿದ್ದೇವೆ. ನಾವು ನಮ್ಮ ಕ್ಷೇತ್ರದಲ್ಲಿ 100% ಲೀಡ್ ಕೊಟ್ಟೆ ಕೊಡುತ್ತೇವೆ, ಆ ಹಂತಕ್ಕೆ ನಾವು ಚುನಾವಣೆ ಮಾಡಿದ್ದೇವೆ. ನಮ್ಮ ಕ್ಷೇತ್ರದಲ್ಲಿ ಒಬ್ಬ ಶಾಸಕರಿದ್ದಾರೆ. ಇವರು ಅಪರೂಪದ ಶಾಸಕರಿರಬೇಕು, ಅವರು ಎಲ್ಲರಿಗೂ ತೊಂದರೆ ಕೊಡುತ್ತಿದ್ದಾರೆ.

ಶಾಶ್ವತ ನೀರಾವರಿ, ಶಿವಗಂಗೆಗೆ ರೋಪ್‌ವೆ ಮಾಡಿಕೊಡಬೇಕು. ನಮಗೆ ಪೊಲೀಸ್ ಠಾಣೆ ಹಾಗೂ ತಹಸಿಲ್ದಾರ್ ಕಚೇರಿಗಳಲ್ಲಿ ಕೆಲಸ ಆಗುವುದಿಲ್ಲ, ಆಗ ನಾವು ಫೋನ್ ಮಾಡಿದ್ರೆ ನೀವು ಅದಕ್ಕೆ ಉತ್ತರಿಸಿ ಅಧಿಕಾರಿಗಳಿಗೆ ಎಚ್ಚರಿಗೆ ನೀಡಬೇಕು ಎಂದು ಸುಧಾಕರ್ ಬಳಿ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎಂ.ವಿ ನಾಗರಾಜ್, ಮಾಜಿ ಪರಿಷತ್ ಸದದ್ಯ ಈ.ಕೃಷ್ಣಪ್ಪ, ಜಿಲ್ಲಾಪಂಚಾಯಿತಿ ಮಾಜಿ ಸದಸ್ಯ ಚಲುವರಾಜು, ವೇಣುಗೋಪಾಲ್, ಮುಖಂಡ ಬೈರೇಗೌಡ್ರು, ಸಪ್ತಗಿರಿಶಂಕರ್ ನಾಯಕ್, ಬಿಜೆಪಿ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ, ಜೆಡಿಎಸ್ ತಾಲೂಕು ಅಧ್ಯಕ್ಷ ಟಿ.ತಿಮ್ಮರಾಯಪ್ಪ, ಕಾರ್ಯಾಧ್ಯಕ್ಷ ರಾಜು ಬೂದಿಹಾಲ್, ತಾಲೂಕು ಆದ್ಯಕ್ಷ ಜಗದೀಶ್‌ಚೌದರಿ, ಮಹಿಳಾ ಮೋರ್ಚಾ ಮಂಜುಳಾಸುರೇಶ್, ನಗರಸಭೆ ಸದಸ್ಯ ಶಿವಕುಮಾರ್, ಅಂಜನಮೂರ್ತಿ, ಸುನೀಲ್‌ಮೂಡ್, ಮುಖಂಡ ಮೋಹನ್‌ಕುಮಾರ್, ಶಿವರುದ್ರಪ್ಪ, ಗುರುಪ್ರಕಾಶ್, ದೇಗನಹಳ್ಳಿಸುರೇಶ್, ಬಿ.ಎಂ.ಶ್ರೀನಿವಾಸ್ ಮತ್ತಿರರು ಇದ್ದರು.

# ಸರ್ಕಾರಿ ಶಾಲೆಗಳಲ್ಲಿ ಉತ್ತಮ ಶಿಕ್ಷಣವಿದ್ದರೂ; ಖಾಸಗಿ ಶಾಲೆಯತ್ತ ಮುಖ

ತಿಪಟೂರು: ಒಂದು ಕಾಲದಲ್ಲಿ ಶಿಕ್ಷಣಕ್ಕೆ ಹರಸಿ ಹೊರ ರಾಜ್ಯಗಳಿಂದ ಅಕ್ಕಪಕ್ಕದ ಜಿಲ್ಲೆಗಳಿಂದ ತಿಪಟೂರಿಗೆ ಆಗಮಿಸುತ್ತಿದ್ದ ಕಾಲ ಕಾರಣ ಶಾಲಾ-ಕಾಲೇಜುಗಳ ಕಡಿಮೆ ಬೆಲೆ ದಾಖಲಾತಿ ಶುಲ್ಕ, ಉತ್ತಮ ಬೋಧನೆ, ಆದರೆ ಇತ್ತೀಚಿನ ಬದಲಾದ ಕಾಲಘಟ್ಟದಲ್ಲಿ ಮುಕ್ಕಾಲು ಲಕ್ಷ ಇದ್ದರೆ ಮಾತ್ರ ಎಲ್‌ಕೆಜಿ ಹಾಗೂ ಯುಕೆಜಿ ಮೊದಲನೇ ತರಗತಿಗೆ ಖಾಸಗಿ ಶಾಲೆಗಳ ಪ್ರವೇಶ ಪಡೆಯಬಹುದು, ಪ್ರವೇಶಾತಿಯಲ್ಲಿ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಶಿಕ್ಷಣ ಎಂಬುವ ಬೋರ್ಡುಗಳು ಪೋಷಕರಿಗೆ ತಬ್ಬಿಬ್ಬು ಮಾಡುತ್ತವೆ.



ಒಟ್ಟಾರೆ ನಮ್ಮ ಮಗು ಪಕ್ಕದ ಮನೆಯ ಮಗುವಿಗಿಂತ ಉತ್ತಮ ಶಿಕ್ಷಣಕ್ಕಿಂತ ಉನ್ನತವಾದ ಶಾಲೆ ಬೇಕು ಎನ್ನುತ್ತಾರೆ.

ಅದೇ ರೀತಿ ಶಾಲೆಗಳು ಸಹ ಪೋಷಕರ ಸ್ವಾಗತಕ್ಕೆ ಆಂಗ್ಲ ಭಾಷೆಯ ಸ್ವಾಗತ ಮನಸೆಳೆಯುವಂತೆ ಮಾಡುತ್ತದೆ.

ಕಳೆದ ವರ್ಷಕ್ಕಿಂತ ಈ ಬಾರಿ ವಾರ್ಷಿಕ ಶಿಕ್ಷಣದ ಖರ್ಚು 70 ಸಾವಿರಕ್ಕೂ ಅಧಿಕ ಶುಲ್ಕವಾಗಿದ್ದು ಈ ಭಾಗದ ಕೊಬ್ಬರಿ ಬೆಳೆಯಿಂದ ಹಾಗೂ ಹೈನುಗಾರಿಕೆಯಿಂದ ಜೀವನ ಸಾಗಿಸುವ ಕುಟುಂಬಗಳಿಗೆ ಕೆಲ ಶಾಲೆಗಳು ಪಾವತಿ ಶುಲ್ಕದಲ್ಲಿ ವರ್ಷಕ್ಕೆ ಎರಡು ಬಾರಿಯಂತೆಯೂ ನೀಡುತ್ತಿಲ್ಲ ಎಂದು ಆರ್ಥಿಕ ಸಂಕಷ್ಟದ ನೋವನ್ನು ತೋಡಿಕೊಂಡರು. ಸರ್ಕಾರಿ ಶಾಲೆಗಳಲ್ಲಿ ಉತ್ತಮ ಶಿಕ್ಷಣವಿದ್ದರೂ ಪೋಷಕರು ಏಕೆ ಹಿಂದೇಟು ಹಾಕುತ್ತಾರೆ ಎನ್ನುತ್ತಾರೆ ಸರ್ಕಾರಿ ಶಾಲೆ ಶಿಕ್ಷಕರು.

ಇತ್ತೀಚಿನ ಶಿಕ್ಷಣ ಪ್ರಾಥಮಿಕ ಹಂತದಲ್ಲಿಯೇ ದುಬಾರಿಯಾಗಿವೆ. ಪ್ರತಿ ವರ್ಷ ಹೊಸದಾಗಿ 3 ರಿಂದ 4 ಶಾಲೆಗಳು ತೆರೆಯುತ್ತಿವೆ ಕೆಲವು ಇಂಗ್ಲಿಷ್ ಮಾಧ್ಯಮದ ಶಾಲೆಗಳು ಹೊರರಾಜ್ಯಗಳಿಂದ ನುರಿತ ಶಿಕ್ಷಕರನ್ನು ಕರೆಯಿಸಿ ಶಿಕ್ಷಣ ನೀಡುತ್ತಿದ್ದವು ಇತ್ತೀಚೆಗೆ ಸ್ಥಳೀಯರಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದಾರೆ ಅಲ್ಲದೆ ಶಾಲೆಗೆ ಕಳುಹಿಸಿದರು ಸಂಜೆಯ ಟ್ಯೂಷನ್‌ಗೆ ಅದೇ ಟೀಚರ್ ಹತ್ತಿರ ಕಳುಹಿಸಬೇಕು, ಶಿಕ್ಷಣ ಸಾಮಗ್ರಿಗಳನ್ನು ಶಿಕ್ಷಕರು ನೀಡಿದ ಸಾಮಗ್ರಿಗಳನ್ನೆ ಹೇಳಿದಷ್ಟು ಹಣ ನೀಡಿ ಕೊಳ್ಳಬೇಕಿದೆ, ಸರ್ಕಾರಿ ಉದ್ಯೋಗಿಗಳಿಗೆ ಉತ್ತಮವೆನಿಸಿದರೆ, ಈ ಭಾಗದಲ್ಲಿ ರೈತರು ಹೆಚ್ಚಾಗಿರುವುದರಿಂದ ನಮ್ಮ ಮಕ್ಕಳು ನಮ್ಮಂತಾಗದೆ ವಿದ್ಯಾವಂತರಾಗಲಿ ಎಂಬುವ ಆಶಾ ಮನೋಭಾವದಿಂದ ಬೆಳೆದ ಕೊಬ್ಬರಿ ಹಣದಿಂದ ಅಥವಾ ಹೈನುಗಾರಿಕೆಯಿಂದ ಬರುವ ಹಣದಿಂದ ಮಕ್ಕಳನ್ನು ನಗರದ ಆಂಗ್ಲ ಶಾಲೆಗಳಿಗೆ ಸೇರಿಸುತ್ತಿದ್ದಾರೆ, ಪ್ರಾಥಮಿಕ ಶಿಕ್ಷಣ ವಾಣಿಜ್ಯ ಕರಣವಾಗಬಾರದು, ಹೆಚ್ಚಿನ ಶುಲ್ಕ ಪಡೆಯುವ ಶಾಲೆಗಳಿಗೆ ಸರ್ಕಾರ ಗಮನ ಹರಿಸಬೇಕು.

–ಕಾಂತರಾಜು, ಮಡೆನೂರು.

ಖಾಸಗಿ ಶಾಲೆಗಳು ಆರ್‌ಟಿಇ ನಿಯಮದಂತೆ ಶಾಲೆಯ ಖರ್ಚು ಆಧಾರಿತವಾಗಿ ಒಟ್ಟು ವಿದ್ಯಾರ್ಥಿಗಳ ಲೆಕ್ಕದಲ್ಲಿ ದಾಖಲಾತಿ ಶುಲ್ಕ ಪಡೆಯಬೇಕು, ಶಾಲೆ ಮುಂಭಾಗದಲ್ಲಿ ಸೂಚನಾ ಫಲಕದಲ್ಲಿ ನಮೂದಿಸಬೇಕು ಹೆಚ್ಚಿನ ಶುಲ್ಕ ಪಡೆದರೆ ಪೋಷಕರು ಶಿಕ್ಷಣ ಇಲಾಖೆಗೆ ದೂರು ಸಲ್ಲಿಸಬಹುದು, ಜಿಲ್ಲಾ ಕಮಿಟಿ ಪ್ರತಿ ವರ್ಷ ಶಾಲೆಗಳನ್ನು ಮರುನೊಂದಣಿ ಮಾಡುವಾಗ ಕ್ರಮ ಕೈಗೊಳ್ಳುತ್ತದೆ, ಸರ್ಕಾರಿ ಶಾಲೆಗಳಲ್ಲಿ ಇತ್ತೀಚೆಗೆ ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿ ಉತ್ತಮ ಶಿಕ್ಷಣ ನೀಡುತ್ತಿದ್ದರು ಪೋಷಕರು ಸಹಕರಿಸುತ್ತಿಲ್ಲ

–ಚಂದ್ರಯ್ಯ, ತಿಪಟೂರು, ಕ್ಷೇತ್ರ ಶಿಕ್ಷಣಾಧಿಕಾರಿ

ಕೇಂದ್ರೀಯ ಮತ್ತು ಅಂತರಾಷ್ಟ್ರೀಯ ಶಾಲೆಗಳೆಂದು ತೆರೆದಿರುವ ಕೆಲ ಶಾಲೆಗಳಲ್ಲಿ ಅಂತರಾಷ್ಟ್ರೀಯ ಶಿಕ್ಷಣ ಪಡೆದ ಶಿಕ್ಷಕರಿಲ್ಲ, ಎಲ್ ಕೆ ಜಿ ಯಿಂದ ಏಳನೇ ತರಗತಿ ವರೆಗೆ ವಿದ್ಯಾಭ್ಯಾಸ ನೀಡಿದ ಶಾಲೆಗಳಲ್ಲಿ ಶಿಕ್ಷಣ ಗುಣಮಟ್ಟದಿಂದ ಹಿಂದುಳಿದ ವಿದ್ಯಾರ್ಥಿಗಳನ್ನು ಗುರುತಿಸಿ ವರ್ಗಾವಣೆ ಪತ್ರ ನೀಡಿ ಸರ್ಕಾರಿ ಶಾಲೆಗಳಿಗೆ ಕಳುಹಿಸುತ್ತಾರೆ, ಖಾಸಗಿ ಶಾಲೆಯವರು ಮಾತ್ರ 100% ಫಲಿತಾಂಶ ಎಂದು ಶಾಲೆಯ ಮುಂಭಾಗದಲ್ಲಿ ಫ್ಲೆಕ್ಸ್‌ಗಳಲ್ಲಿ ಹಾಕುತ್ತಾರೆ, ಅಂಕಪಟ್ಟಿಯಲ್ಲಿ ಹಿಂದುಳಿದ ವಿದ್ಯಾರ್ಥಿಯನ್ನು ಸರ್ಕಾರಿ ಶಾಲೆ ದಾಖಲಿಸಿಕೊಳ್ಳುತ್ತದೆ ಇದರಿಂದ ಸರ್ಕಾರಿ ಶಾಲೆಯ ಫಲಿತಾಂಶ ಹಿನ್ನಡೆಯಾಗುತ್ತಿದೆ, ಒಟ್ಟಾರೆ ಕೆಲ ಖಾಸಗಿ ಶಾಲೆಗಳಿಂದ ಪೋಷಕರ ಜೇಬಿಗೆ ಕತ್ತರಿ ಬೀಳುತ್ತಿದೆ ಎಂದರೆ ತಪ್ಪಾಗಲಾರದು.

ವಿದ್ಯಾರ್ಥಿಯ ಪೋಷಕರು ತಿಪಟೂರು.

ಇ-ಪೇಪರ್: www.munjaneevartheepaper.com

ಸ್ಥಳೀಯ

# ಜೂನ್ 1 ರಿಂದ ರಾಮನಗರದಾದ್ಯಂತ ನಿಷೇಧಾಜ್ಞೆ ಜಾರಿ

ರಾಮನಗರ: ಬೆಂಗಳೂರು ಪದವೀಧರ ಕ್ಷೇತ್ರದಿಂದ ಕರ್ನಾಟಕ ವಿಧಾನ ಪರಿಷತ್ತಿಗೆ ದ್ವೈವಾರ್ಷಿಕ ಚುನಾವಣೆ-2024ರ ಮತದಾನವು ಇದೇ 2024ರ ಜೂನ್ 3 ರಂದು ಜರುಗಲಿದ್ದು, ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ಮತದಾನ ಕೊನೆಗೊಳ್ಳುವ 48 ಗಂಟೆಗಳ ಪೂರ್ವದಲ್ಲಿ ಮಾದರಿ ನೀತಿ ಸಂಹಿತೆ ಹಾಗೂ ಜನತಾ ಪ್ರಾತಿನಿಧ್ಯ ಅಧಿನಿಯಮ ಕಾಯ್ದೆ 1951ರ ಕಲಂ 126 ರನ್ವಯ ಇರುವ ಷರತ್ತುಗಳನ್ನು ಹಾಗೂ ನಿಬಂಧನೆಗಳನ್ನು ತಪ್ಪದೇ ಪಾಲಿಸುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ಆದೇಶಿಸಿದ್ದಾರೆ.

ಈ ಸಮಯದಲ್ಲಿ ಮತದಾರರಿಗೆ ವಿವಿಧ ಆಸೆ, ಆಮಿಷಗಳಿಗೆ ಒಡ್ಡುವುದು, ಬೆದರಿಸಲು ಯತ್ನಿಸುವುದು. ತಮ್ಮ ಪರವಾಗಿ ಬೆಂಬಲಿಸಲು ಪುಸಲಾಯಿಸುವುದು, ಮತಗಟ್ಟೆಗಳ ಹತ್ತಿರದಲ್ಲಿ ಪ್ರಚಾರ ಮಾಡುವುದು, ಸಾರ್ವಜನಿಕ ಸಭೆ ನಡೆಸುವುದು, ಮತದಾರರನ್ನು ವಿವಿಧ ಸಾರಿಗೆ ವ್ಯವಸ್ಥೆಗಳ ಮೂಲಕ ಮತಗಟ್ಟೆಗಳಲ್ಲಿ ಕರೆತರುವುದು, ಶಾಂತತೆಗೆ ಭಂಗ ಉಂಟು ಮಾಡುವುದು, ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ ತರುವುದು ಹಾಗೂ ಇತರೆ ಅಹಿತಕರ ಘಟನೆಗಳು ನಡೆಯುವಂತೆ ಮಾಡುವ ಸಂಭವನೀಯತೆಗಳಿದ್ದು, ಇದನ್ನು ತಡೆಗಟ್ಟುವುದು ಹಾಗೂ ಮತದಾನದ ಪಾವಿತ್ರತೆಯನ್ನು ಕಾಪಾಡುವ ಹಿತದೃಷ್ಠಿಯಿಂದ ರಾಮನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ದಂಡ ಪ್ರಕ್ರಿಯೆ ಸಂಹಿತೆ, 1973 ಕಲಂ 144ರ ಮೇರೆಗೆ ಪ್ರತಿಬಂಧಕಾಜ್ಞೆಯನ್ನು ಜಾರಿಗೊಳಿಸಿ ಆದೇಶಿಸಿದ್ದಾರೆ.

ರಾಮನಗರ ಜಿಲ್ಲೆಯ ವ್ಯಾಪ್ತಿಯಲ್ಲಿ 5 ಕ್ಕಿಂತ ಹೆಚ್ಚು ಜನರು ಗುಂಪು ಸೇರುವುದು, ಮೆರವಣಿಗೆ ಹಾಗೂ ಸಭೆ ಸಮಾರಂಭ ಜರುಗಿಸುವುದನ್ನು ನಿಷೇಧಿಸಿದೆ. ಚುನಾವಣಾ ಅಭ್ಯರ್ಥಿ/ ಬೆಂಬಲಿಗರು ಸೇರಿ 5 ಜನರಿಗಿಂತ ಹೆಚ್ಚಿನ ಸಂಖ್ಯೆ ಜನರು ಗುಂಪು ಸೇರುವಂತಿಲ್ಲ, ಶಸ್ತ್ರ, ಬಡಿಗೆ, ಭರ್ಜಿ, ಖಡ್ಗ, ಗದೆ, ಬಂದೂಕು, ಚೂರಿ, ಲಾಟಿ, ದೊಣ್ಣೆ, ಚಾಕು ಅಥವಾ ದೇಹಕ್ಕೆ ಅಪಾಯವನ್ನುಂಟು ಮಾಡಬಹುದಾದ ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ಹೋಗುವುದನ್ನು ಮತ್ತು ಅವುಗಳೊಂದಿಗೆ ತಿರುಗಾಡುವುದನ್ನು ಪ್ರತಿಬಂಧಿಸಲಾಗಿದೆ.

ಮತಗಟ್ಟೆಗಳ 200 ಮೀಟರ್ ಒಳಗೆ ಚುನಾವಣಾ ಪ್ರಚಾರ ನಿಷೇಧಿಸಿದೆ, ಈ ಪ್ರದೇಶದಲ್ಲಿ ಬರುವಂತಹ ಜೆರಾಕ್ಸ್ ಅಂಗಡಿ, ಸೈಬರ್ ಕೆಫೆ, ಬುಕ್ ಸ್ಟಾಲ್‌ಗಳನ್ನು ನಿರ್ಭಂಧಿಸಿದೆ. ಸ್ಫೋಟಕ ವಸ್ತುಗಳು ಯಾವುದೇ ದಾಹಕ ವಸ್ತುಗಳು ಇತ್ಯಾದಿಗಳನ್ನು ಸದರಿ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಹಾಗೂ ಶೇಖರಿಸುವುದನ್ನು ನಿಷೇಧಿಸಲಾಗಿದೆ.

ಕಲ್ಲುಗಳನ್ನು ಮತ್ತು ಎಸೆಯುವಂತಹ ವಸ್ತುಗಳನ್ನು ಎಸೆಯುವ ಮತ್ತು ಬಿಡುವ ಸಾಧನಗಳನ್ನು ತೆಗೆದುಕೊಂಡು ಹೋಗವುದನ್ನು ನಿಷೇಧಿಸಿದೆ. ಮನುಷ್ಯ ಶವಗಳ ಅಥವಾ ಅವುಗಳ ಆಕೃತಿ ಅಥವಾ ಪ್ರತಿಮೆಗಳ ಪ್ರದರ್ಶನ ಮತ್ತು ದಹನ ಮಾಡುವುದನ್ನು ಪ್ರತಿಬಂಧಿಸಲಾಗಿದೆ. ಮತಗಟ್ಟೆ ಸ್ಥಳಗಳಲ್ಲಿ ಬಹಿರಂಗವಾಗಿ ಘೋಷಣೆ ಕೂಗುವುದು, ಪದ ಹಾಡುವುದು, ವಾದ್ಯ ಭಾರಿಸುವುದು, ವ್ಯಾಖ್ಯಾನ ಕೊಡುವುದು, ಸನ್ನೆ ಅಥವಾ ನಕಲಿ ಪ್ರದರ್ಶನವನ್ನು ಹಾಗೂ ಸಾರ್ವಜನಿಕ ಸಭ್ಯತೆ ಅಥವಾ ನೀತಿಯನ್ನು ಆಕ್ರಮಿಸಬಹುದಾದ ಕೃತ್ಯಗಳನ್ನು ನಿಷೇಧಿಸಲಾಗಿದೆ.

ಸಾರ್ವಜನಿಕವಾಗಿ ಯಾವುದೇ ವ್ಯಕ್ತಿ ಪ್ರಚೋದನಾತ್ಮಕ ಹಾಗೂ ಉದ್ರೇಕಕಾರಿ ಹಾಡುಗಳು, ಕೂಗಾಟ ಮಾಡುವುದನ್ನು ಹಾಗೂ ವ್ಯಕ್ತಿಗಳ ತೇಜೋವಧೆ ಮಾಡುವಂತಹ ಚಿತ್ರಗಳು, ಚಿಹ್ನೆಗಳು, ಪ್ರತಿಕೃತಿಗಳು ಮುಂತಾದವುಗಳನ್ನು ಪ್ರದರ್ಶಿಸುವುದಾಗಲೀ ಹಾಗೂ ಸಾರ್ವಜನಿಕ ಗಾಂಭೀರ್ಯ ಹಾಗೂ ನೈತಿಕತೆಗೆ ಭಂಗ ತರುವಂತಹ ಹಾಗೂ ಕಾನೂನು ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗುವುದನ್ನು ನಿಷೇಧಿಸಲಾಗಿದೆ.

ಯಾವುದೇ ವ್ಯಕ್ತಿ ಬಹಿರಂಗವಾಗಿ ಮೇಲೆ ವಿವರಿಸಿದ ಮಾರಕಾಸ್ತ್ರಗಳು, ಸ್ಫೋಟಕ ವಸ್ತುಗಳು ವಿನಾಶಕಾರಿ ವಸ್ತುಗಳನ್ನು ಹಾಗೂ ಇತರೆ ಆಕ್ಷೇಪಾರ್ಹ ವಸ್ತುಗಳನ್ನು ಹೊಂದಿದ್ದು ಕಂಡು ಬಂದರೆ ಕೂಡಲೇ ಅವುಗಳನ್ನು ವಶಪಡಿಸಿಕೊಳ್ಳಲು ಪೊಲೀಸ್ ಅಧಿಕಾರಿಗಳಿಗೆ ಅಧಿಕಾರವಿರುತ್ತದೆ. ಅಂತಹ ಮಾರಕಾಸ್ತ್ರಗಳನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು. ಹಾಗೂ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತಿಯ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದ್ದಾರೆ.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ–ಪೇಪರ್: www.munjaneevartheepaper.com
20 MONDAY MAY 2024
20 ಸೋಮವಾರ ಮೇ 2024

# ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ ಹಿನ್ನೆಲೆ ಜಿಲ್ಲಾಧಿಕಾರಿಗಳಿಂದ ನಿಷೇಧಾಜ್ಞೆ

ಚಿಕ್ಕಬಳ್ಳಾಪುರ : ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ದ್ವೈವಾರ್ಷಿಕ ಚುನಾವಣೆಯ ಮತದಾನವು ಜೂನ್ 3 ರಂದು ನಿಗದಿಯಾಗಿರುವ ಹಿನ್ನೆಲೆಯಲ್ಲಿ ಐಪಿಸಿ ಸೆಕ್ಷನ್ 144 ಅಡಿಯಲ್ಲಿ ಹಲವು ಆದೇಶಗಳನ್ನು ಪಾಲನೆ ಮಾಡಲು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ಆದೇಶ ಹೊರಡಿಸಿದ್ದಾರೆ.

ಜೂನ್ 01 ರ ಸಂಜೆ 5 ಗಂಟೆಯಿಂದ ಜೂನ್ 3 ರ ಮಧ್ಯ ರಾತ್ರಿ 12 ಗಂಟೆಯವರೆಗೆ ಕಾನೂನು ಭಾಹಿರವಾಗಿ ಒಟ್ಟುಗೂಡುವುದು, ಮೆರವಣಿಗೆ, ರ್ಯಾಲಿ ನಿಷೇಧಿಸಲಾಗಿದೆ. ಸಾರ್ವತ್ರಿಕ ಸ್ಥಳಗಳಲ್ಲಿ, ಬೀದಿಗಳಲ್ಲಿ ಐವರು ಹಾಗೂ ಅದಕ್ಕಿಂತ ಹೆಚ್ಚು ವ್ಯಕ್ತಿಗಳು ಗುಂಪು ಗೂಡುವಂತಿಲ್ಲ. ಘೋಷಣೆಗಳನ್ನು ಕೂಗುವಂತಿಲ್ಲ. ಸಾರ್ವಜನಿಕರ ಶಾಂತಿ ಹಾಗೂ ನೆಮ್ಮದಿಗೆ ಭಂಗತರುವುದನ್ನು ನಿಷೇಧಿಸಲಾಗಿದೆ.

ಮತದಾನದ ಮುಕ್ತಾಯದ ಸಮಯದ ಕೊನೆಗೊಳ್ಳುವ 48 ಗಂಟೆಗಳ ಅವಧಿಯಲ್ಲಿ ಚುನಾವಣೆಯ ಉದ್ದೇಶಕ್ಕಾಗಿ ಯಾವುದೇ ಧ್ವನಿವರ್ಧಕ ಬಳಸಲು ಅನುಮತಿಸಲಾಗುವುದಿಲ್ಲ.

ಯಾವುದೇ ಹಣ, ಉಡುಗೊರೆ ಅಥವಾ ಮದ್ಯದ ವಿತರಣೆ ತಪ್ಪಿಸಲು ಮತ್ತು ಕಾನೂನು ಸುವ್ಯವಸ್ಥೆಗಳ ಸಮಸ್ಯೆಗಳನ್ನು ತಡೆಗಟ್ಟುವ ಉದ್ದೇಶದಿಂದ ಚುನಾವಣಾ ದಿನದಂದು ಅಭ್ಯರ್ಥಿಗಳು ಚುನಾವಣೆಗಾಗಿ ಅನುಮತಿ ಪಡೆದುಕೊಂಡಿರುವ ವಾಹನಗಳನ್ನು ಮಾತ್ರ ಬಳಕೆ ಮಾಡಬೇಕು. ಹಣ, ಉಡುಗೊರೆ, ಮದ್ಯ ವಿತರಣೆಯನ್ನು ತಪ್ಪಿಸುವ ಸಲುವಾಗಿ ಎಲ್ಲಾ ಖಾಸಗಿ ವಾಹನಗಳನ್ನು ನಿಯಮಾನುಸಾರ ಪರಿಶೀಲಿಸಲಾಗುತ್ತದೆ.



ಯಾವುದೇ ಮದ್ಯದಂಗಡಿ, ಹೋಟೆಲ್ ಮಾರಾಟ/ವಿತರಣೆ ಮಾಡುವ ಇತರೆ ರೆಸ್ಟೋರೆಂಟ್, ಕ್ಲಬ್ ಗಳು, ಮದ್ಯ ಎಷ್ಟಾಬ್ಲಿಷ್ ಮೆಂಟ್ ಗಳು ಸೂಚಿಸಲಾಗಿರುವ ದಿನ ಹಾಗೂ ಅವಧಿಗಳಲ್ಲಿ ಮದ್ಯ ಮಾರಾಟ ಮಾಡಬಾರದು. ಸ್ವಾಮ್ಯದ ಕ್ಲಬ್ ಗಳು, ಸ್ಟಾರ್ ಹೋಟೆಲ್ ಗಳು, ರೆಸ್ಟೋರೆಂಟ್ ಗಳು ಇತ್ಯಾದಿ ಮತ್ತು ಮದ್ಯದ ಪೂರೈಕೆಗಾಗಿ ವಿವಿಧ ವರ್ಗಗಳ ಪರವಾನಗಿಗಳನ್ನು ಪಡೆದಿದ್ದರೂ ಸಹ ಸೂಚಿಸಲಾಗಿರುವ ದಿನ ಹಾಗೂ ಸಮಯದಲ್ಲಿ ಮದ್ಯ ಪೂರೈಕೆಗೆ ಅನುಮತಿಸಲಾಗುವುದಿಲ್ಲ.

ಮತದಾನ ನಡೆಯುವ ಎಲ್ಲಾ ಕ್ಷೇತ್ರಗಳಲ್ಲಿ ಮತದಾನದ ದಿನಕ್ಕಿಂತ 72 ಗಂಟೆಗಳ ಮೊದಲು ಯಾವುದೇ ಸ್ಥಳದಲ್ಲಿ ಬೈಕ್ ರ್ಯಾಲಿ ನಡೆಸಲು ಅನುಮತಿಸಲಾಗುವುದಿಲ್ಲ.

ಮತದಾನ ಕೊನೆಗೊಳ್ಳುವ 48 ಗಂಟೆಗಳ ಹಿಂದಿನ ಅವಧಿಯಲ್ಲಿ ಪ್ರಜಾಪ್ರತಿನಿಧಿ ಕಾಯ್ದೆ 1951ರ ಸೆಕ್ಷನ್ 126ರ ಅಡಿಯಲ್ಲಿ ಯಾವುದೇ ಸಾರ್ವಜನಿಕ ಸಭೆ, ಮೆರವಣಿಗೆ, ಸಂಗೀತ ಕಛೇರಿಗಳು, ರ್ಯಾಲಿಗಳು ಅಥವಾ ಯಾವುದೇ ರೀತಿಯ ಚುನಾವಣ ಪ್ರಚಾರಕ್ಕೆ ಅವಕಾಶವಿರುವುದಿಲ್ಲ. ಆದಾಗ್ಯೂ ಈ ಅವಧಿಯಲ್ಲಿ ಮನೆಮನೆ ಪ್ರಚಾರಕ್ಕೆ ಯಾವುದೇ ನಿರ್ಬಂಧ ಇರುವುದಿಲ್ಲ.

ಆದೇಶದ ಉಲ್ಲಂಘನೆಯು ಐಪಿಸಿ ಸೆಕ್ಷನ್ 188 ಮತ್ತು ಕಾನೂನಿನಿಂದ ಇತರೆ ಸಂಬಂಧಿತ ನಿಬಂಧನೆಗಳಡಿಯಲ್ಲಿ ಶಿಕ್ಷಾರ್ಹವಾಗಿರುತ್ತದೆ.

ಆದೇಶವು ಧಾರ್ಮಿಕ ಕಾರ್ಯಗಳು, ಮದುವೆ, ಅಂತ್ಯಕ್ರಿಯೆ ಕಾರ್ಯಗಳಿಗೆ ಅನ್ವಯಿಸುವುದಿಲ್ಲ ಹಾಗೂ ಚುನಾವಣಾ ಕರ್ತವ್ಯಕ್ಕೆ ನಿಯೋಜಿತರಾಗಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಈ ಆದೇಶವು ಅನ್ವಯಿಸುವುದಿಲ್ಲ ಎಂದು ಜಿಲ್ಲಾ ಚುನಾವಣಾಧಿಕಾರಿ ಪಿ.ಎನ್. ರವೀಂದ್ರ ಅವರು ಆದೇಶದಲ್ಲಿ ತಿಳಿಸಿದ್ದಾರೆ.



## ಅಂಜಲಿ ಹತ್ಯೆ ಖಂಡಿಸಿ: ಬಿಜೆಪಿಯಿಂದ ಪ್ರತಿಭಟನೆ




ಶಿವಮೊಗ್ಗ: ಹುಬ್ಬಳ್ಳಿಯ ಅಂಜಲಿ ಅಂಬಿಗೇರ ಹತ್ಯೆ ಖಂಡಿಸಿ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸಬೇಕೆಂದು ಆಗ್ರಹಿಸಿ ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಇಂದು ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿತು.

ಅಂಜಲಿ ಹತ್ಯೆ ಅತ್ಯಂತ ಕ್ರೂರವಾದುದು. ಕಾಂಗ್ರೆಸ್ ಸರ್ಕಾರ ಬಂದ ಮೇಲೆ ಇಡೀ ರಾಜ್ಯಾದ್ಯಂತ ಹೆಣ್ಣು ಮಕ್ಕಳ ಸರಣಿ ಕೊಲೆಗಳಾಗುತ್ತಿವೆ. ಕಾನೂನು ಸುವ್ಯವಸ್ಥೆ ಕುಸಿದುಬಿದ್ದಿದೆ. ಈ ಹಿಂದೆ ಹುಬ್ಬಳ್ಳಿಯ ನೇಹಾ, ಮಡಿಕೇರಿಯ ಮೀನಾ, ಹತ್ಯೆಯಾಗಿತ್ತು. ಅದೇ ರೀತಿ ಈಗ ಅಂಜಲಿ ಕೊಲೆಯಾಗಿದೆ. ಕಾಂಗ್ರೆಸ್ ಸರ್ಕಾರದಲ್ಲಿ ಕೊಲೆಗಡುಕರಿಗೆ ಹೆದರಿಕೆ ಇಲ್ಲದಂತಾಗಿದೆ ಎಂದು ದೂರಿದರು. ಈ ಪ್ರಕರಣದ ಬಗ್ಗೆ ತ್ವರಿತಗತಿಯಲ್ಲಿ ವಿಚಾರಣೆ ನಡೆಸಬೇಕು. ಆರೋಪಿಯನ್ನು ಗಲ್ಲು ಶಿಕ್ಷೆಗೆ ಗುರಿಪಡಿಸಬೇಕು. ಇಂತಹ ಘಟನೆ ಮರುಕಳಿಸದಂತೆ ಕ್ರಮ ಕೈಗೊಳ್ಳಬೇಕು. ಶೀಘ್ರವೇ ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ತೀವ್ರ ಹೋರಾಟ ನಡೆಸಲಾಗುವುದು ಎಂದು ಮನವಿಯಲ್ಲಿ ಎಚ್ಚರಿಸಲಾಗಿದೆ.

ಈ ಸಂದರ್ಭದಲ್ಲಿ ಮಹಿಳಾ ಮೋರ್ಚಾದ ಜಿಲ್ಲಾಧ್ಯಕ್ಷೆ ಗಾಯತ್ರಿದೇವಿ ಮಲ್ಲಪ್ಪ, ಪ್ರಮುಖರಾದ ಮಂಗಳಾ ನಾಗೇಂದ್ರ, ಜ್ಯೋತಿ ರಘು, ಯಶೋದಾ, ರಶ್ಮಿ ಶ್ರೀನಿವಾಸ್, ಸುರೇಖಾ ಪಾಲಾಕ್ಷಪ್ಪ, ಸುಮಿತ್ರಾ ಇದ್ದರು.




ದೆಹಲಿಯಲ್ಲಿ ಆಯೋಜಿಸಿದ್ದ ಬೃಹತ್ ಪ್ರಚಾರ ಸಮಾವೇಶದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬಿಜೆಪಿ ಪರ ಮತಯಾಚಿಸಿದರು.

## ಜೂ. 7-8ರಂದು ಬೃಹತ್ ಉದ್ಯೋಗ ಮೇಳ

**200ಕ್ಕೂ ಅಧಿಕ ಕಂಪನಿಗಳು ಭಾಗವಹಿಸುವ ನಿರೀಕ್ಷೆ ಇದ್ದು, ಹೈದರಾಬಾದ್ ನ ಫ್ಯಾಕ್ಟ್ ಸೆಟ್, ಇಎಕ್ಸ್ಎಲ್ ಸರ್ವಿಸ್, ಮಹೀಂದ್ರಾ ಫಿನಾನ್ಸ್, ಪ್ರತಿಷ್ಠಿತ ಬ್ಯಾಂಕ್ ಗಳಾದ ಹೆಚ್.ಡಿ.ಎಫ್.ಸಿ., ಆಕ್ಸಿಸ್, ಐ.ಡಿ.ಎಫ್.ಸಿ., ಫಸ್ಟ್ ಬ್ಯಾಂಕ್, ಬಂಧನ್ ಬ್ಯಾಂಕ್, ಫ್ಲಿಪ್ ಕಾರ್ಟ್, ಇವೈ ಕಂಪನಿ ಮುಂತಾದ ಪ್ರತಿಷ್ಠಿತ ಕಂಪನಿಗಳು ಭಾಗವಹಿಸಲಿವೆ ಎಂದರು.**

ಶಿವಮೊಗ್ಗ: ಮೂಡಬಿದರೆಯಲ್ಲಿರುವ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ವತಿಯಿಂದ ಜೂ. 7 ಮತ್ತು 8 ರಂದು ಬೃಹತ್ ಉದ್ಯೋಗ ಮೇಳವನ್ನು ಶಿಕ್ಷಣ ಸಂಸ್ಥೆ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಆಳ್ವಾಸ್ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಪ್ರಸಾದ್ ಶೆಟ್ಟಿ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಪ್ರತಿಷ್ಠಾನದ ವತಿಯಿಂದ ಆಯೋಜಿಸಲಾಗಿರವ ಉದ್ಯೋಗಮೇಳ 14ನೇ ಮೇಳವಾಗಿದೆ. ಬ್ಯಾಂಕಿಂಗ್, ಹಣಕಾಸು, ಐಟಿ, ಐಟಿಸಿ, ಮ್ಯಾನುಫ್ಯಾಕ್ಚರಿಂಗ್, ಹೆಲ್ತ್ ಕೇರ್, ಫಾರ್ಮಾ, ಆಟೊಮೊಬೈಲ್ಸ್, ಹಾಸ್ಪಿಟಲಿಟಿ ಸೇರಿದಂತೆ ಪ್ರತಿನಿಧಿಸುವ ಉನ್ನತ ಕಂಪನಿಗಳು ಆಳ್ವಾಸ್ ಪ್ರಗತಿಯಲ್ಲಿ ನೇಮಕಾತಿ ನಡೆಸಲಿವೆ ಎಂದರು.

ಈ ಕಂಪನಿಗಳು ಪದವಿ ಮತ್ತು ಸ್ನಾತಕೋತ್ತರ ಪದವೀಧರರು, ವೈದ್ಯಕೀಯ, ಪ್ಯಾರಾ ಮೆಡಿಕಲ್, ಇಂಜಿನಿಯರಿಂಗ್, ಕಲಾ, ವಾಣಿಜ್ಯ, ಮ್ಯಾನೇಜ್ ಮೆಂಟ್, ಬೇಸಿಕ್ ಸೈನ್ಸ್, ನರ್ಸಿಂಗ್, ಐಟಿಐ, ಡಿಪ್ಲೊಮಾ, ಪಿಯುಸಿ, ಎಸ್ಎಸ್ಎಲ್ಸಿ ಹಾಗೂ ಇತರ ಅರ್ಹ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲಾಗುವುದು ಎಂದರು.

200ಕ್ಕೂ ಅಧಿಕ ಕಂಪನಿಗಳು ಭಾಗವಹಿಸುವ ನಿರೀಕ್ಷೆ ಇದ್ದು, ಹೈದರಾಬಾದ್ ನ ಫ್ಯಾಕ್ಟ್ ಸೆಟ್, ಇಎಕ್ಸ್ಎಲ್ ಸರ್ವಿಸ್, ಮಹೀಂದ್ರಾ ಫಿನಾನ್ಸ್, ಪ್ರತಿಷ್ಠಿತ ಬ್ಯಾಂಕ್ ಗಳಾದ ಹೆಚ್.ಡಿ.ಎಫ್.ಸಿ., ಆಕ್ಸಿಸ್, ಐ.ಡಿ.ಎಫ್.ಸಿ., ಫಸ್ಟ್ ಬ್ಯಾಂಕ್, ಬಂಧನ್ ಬ್ಯಾಂಕ್, ಫ್ಲಿಪ್ ಕಾರ್ಟ್, ಇವೈ ಕಂಪನಿ ಮುಂತಾದ ಪ್ರತಿಷ್ಠಿತ ಕಂಪನಿಗಳು ಭಾಗವಹಿಸಲಿವೆ ಎಂದರು.

ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳುವ ಕಂಪನಿಗಳ ಹಾಗೂ ನವೀಕೃತ ಮಾಹಿತಿಗಳನ್ನು ಅಧಿಕೃತ ವೆಬ್ ಸೈಟ್ www.alvaspragati.com ನಲ್ಲಿ ಪಡೆಯಬಹುದಾಗಿದೆ. ಅಭ್ಯರ್ಥಿಗಳು ಈ ವೆಬ್ ಸೈಟ್‌ನಲ್ಲಿ ಕಡ್ಡಾಯವಾಗಿ ಉಚಿತ ಆನ್ ಲೈನ್ ಮಾಡಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊ. 90089 07716, 96631 90590 ಸಂಪರ್ಕಿಸಬಹುದು.ಪತ್ರಿಕಾಗೋಷ್ಠಿಯಲ್ಲಿ ಕೆ.ಆರ್. ನಿತಿನ್ ಉಪಸ್ಥಿತರಿದ್ದರು.

## ವಿಧಾನ ಪರಿಷತ್ತಿನ ವಿವಿಧ ಕ್ಷೇತ್ರಗಳ ಸಮಸ್ಯೆಗಳು ಶೀಘ್ರವೇ ಪರಿಹಾರ: ಬಿ.ವೈ.ವಿಜಯೇಂದ್ರ

ಬೆಂಗಳೂರು: ವಿಧಾನಪರಿಷತ್ತಿನ ವಿವಿಧ ಕ್ಷೇತ್ರಗಳಲ್ಲಿ ಇದ್ದ ಸಮಸ್ಯೆಗಳು ಶೀಘ್ರವೇ ಪರಿಹಾರಗೊಳ್ಳಲಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ವಿಶ್ವಾಸ ವ್ಯಕ್ತಪಡಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ರಾಜ್ಯದ ವಿಧಾನಪರಿಷತ್ತಿನ ಪದವೀಧರ– ಶಿಕ್ಷಕರ ಕ್ಷೇತ್ರದ 6 ಸ್ಥಾನಗಳಿಗೆ ಚುನಾವಣೆ ನಡೆಯುತ್ತಿದೆ. ಬಿಜೆಪಿ 4 ಸ್ಥಾನಗಳಲ್ಲಿ ಸ್ಪರ್ಧಿಸುತ್ತಿದ್ದು, ಎರಡು ಸ್ಥಾನಗಳನ್ನು ಜೆಡಿಎಸ್ ಪಕ್ಷಕ್ಕೆ ಬಿಟ್ಟು ಕೊಟ್ಟಿದ್ದೇವೆ ಎಂದು ತಿಳಿಸಿದರು. ನಿನ್ನೆ 6 ಕ್ಷೇತ್ರಗಳಿಗೆ ಬಿಜೆಪಿಯಿಂದ ಉಸ್ತುವಾರಿಗಳನ್ನೂ ನೇಮಿಸಿದ್ದೇವೆ. ಈಶಾನ್ಯ ಪದವೀಧರ ಕ್ಷೇತ್ರದಲ್ಲಿ ನಮ್ಮ ಅಭ್ಯರ್ಥಿ ಅಮರನಾಥ ಪಾಟೀಲ್ ಅವರು ಮೊನ್ನೆ ನಾಮಪತ್ರ ಸಲ್ಲಿಸಿದ್ದಾರೆ. ನಮ್ಮ ಪಕ್ಷದ ಹಿರಿಯ ಮುಖಂಡ ಸುರೇಶ್ ಸಜ್ಜನ್ ಅವರು ಕಳೆದೆರಡು ವರ್ಷಗಳಿಂದ ನಿರಂತರವಾಗಿ ಈ ಕ್ಷೇತ್ರದಲ್ಲಿ ಪ್ರವಾಸ ಮಾಡಿ, ಸಂಘಟನೆ ಮಾಡಿ ಆಕಾಂಕ್ಷಿಯಾಗಿದ್ದು, ನಾಮಪತ್ರ ಸಲ್ಲಿಸಿದ್ದರು. ಸುರೇಶ್ ಸಜ್ಜನ್ ಅವರು ಪಕ್ಷದ ಹಿರಿಯ ನಾಯಕ ಮಾನ್ಯ ಯಡಿಯೂರಪ್ಪರನ್ನು ಭೇಟಿ ಮಾಡಿ, ಚುನಾವಣಾ ಅಖಾಡದಿಂದ ಹಿಂದೆ ಸರಿದು ಬಿಜೆಪಿ ಬೆಂಬಲಿಸಲು ಮುಂದಾಗಿರುವುದು ಸಂತಸದ ವಿಚಾರ ಎಂದು ತಿಳಿಸಿದರು.



ಇದರ ಪರಿಣಾಮವಾಗಿ ಈಶಾನ್ಯ ಪದವೀಧರ ಕ್ಷೇತ್ರದಲ್ಲಿ ನಮ್ಮ ಅಭ್ಯರ್ಥಿ ಗೆಲ್ಲಲು ಅನುಕೂಲವಾಗಿದೆ. ಅದೇರೀತಿ ದಕ್ಷಿಣ ಶಿಕ್ಷಕರ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಲಿಂಗರಾಜ್ ಅವರ ಹೆಸರನ್ನು ಘೋಷಿಸಲಾಗಿತ್ತು. ನಂತರ ಜೆಡಿಎಸ್ ಪಕ್ಷಕ್ಕೆ ಕ್ಷೇತ್ರ ಬಿಟ್ಟು ಕೊಡಲಾಗಿತ್ತು. ನಾಮಪತ್ರ ಸಲ್ಲಿಸಿದ್ದ ಲಿಂಗರಾಜ್ ಅವರ ಮನವೊಲಿಕೆ ಮಾಡಿ ನಾಮಪತ್ರ ಹಿಂದಕ್ಕೆ ಪಡೆಯುವುದಾಗಿ ಅವರೇ ಬಹಿರಂಗವಾಗಿ ಹೇಳಿದ್ದಾರೆ. ಎರಡೂ ಕ್ಷೇತ್ರದಲ್ಲೂ ಕೂಡ ಸಮಸ್ಯೆಗಳು ಇತ್ಯರ್ಥವಾಗಿವೆ. ಬೇರೆ ಕ್ಷೇತ್ರಗಳ ಸಮಸ್ಯೆ ಬಗೆಹರಿಸುವ ಕೆಲಸವನ್ನು ಇವತ್ತು ಮತ್ತು ನಾಳೆ ಮಾಡಲಿದ್ದು, ಅವು ಪರಿಹಾರ ಕಾಣಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

### ಪೊಲೀಸ್ ವ್ಯವಸ್ಥೆ ಸರಿ ಇಲ್ಲ

ಯಾರೇನು ಮಾಡಿದರೂ ನಡೆಯುತ್ತದೆ ಎಂಬ ಭಾವನೆ, ಸರಕಾರ ಬಿಗಿ ಕ್ರಮ ಕೈಗೊಳ್ಳದ ಕಾರಣ ದಿನೇದಿನೇ ಕೊಲೆ ಪ್ರಕರಣ ಹೆಚ್ಚಾಗಿದೆ ಎಂದು ಆಕ್ಷೇಪಿಸಿದರು. ಸರಕಾರ ಈಗಲಾದರೂ ಎಚ್ಚತ್ತುಕೊಂಡು ಕಾನೂನು– ಸುವ್ಯವಸ್ಥೆ ಕಾಪಾಡಬೇಕು ಎಂದು ಅವರು ಆಗ್ರಹಿಸಿದರು. ಮಹಿಳೆಯರ ಸುರಕ್ಷತೆ ಪ್ರಶ್ನೆ ನಿಟ್ಟಿನಲ್ಲಿ ನಾವು ಕೂಡ ರಾಜ್ಯ ಸರಕಾರವನ್ನು ಒತ್ತಾಯಿಸುತ್ತೇವೆ ಎಂದು ನುಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಬಂದಾಗಿನಿಂದ ಕಾನೂನು– ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ಎಲ್ಲಿ ನೋಡಿದರೆ ಅಲ್ಲಿ ಕೊಲೆ, ಸುಲಿಗೆಗಳು ಆಗುತ್ತಿವೆ. ಅತ್ಯಾಚಾರ ಪ್ರಕರಣಗಳು, ಲವ್ ಜಿಹಾದ್ ಪ್ರಕರಣಗಳು ಜಾಸ್ತಿ ಆಗುತ್ತಿವೆ. ಮಹಿಳೆಯರಿಗೆ ಸುರಕ್ಷತೆ ಪ್ರಶ್ನೆ ಕಾಡುತ್ತಿದೆ ಎಂದು ವಿವರಿಸಿದರು. ಈ ಅಂಶಗಳನ್ನು ಮುಂದಿಟ್ಟು ಇವತ್ತು ಮಹಿಳಾ ಮೋರ್ಚಾ ವತಿಯಿಂದ ರಾಜ್ಯಾದ್ಯಂತ ಪ್ರತಿಭಟನೆ ನಡೆಸಲಾಗಿದೆ. ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದೇವೆ. ಅಪರಾಧ ಪ್ರಮಾಣ ಹೆಚ್ಚಳದಿಂದ ರಾಜ್ಯಕ್ಕೆ ಕೆಟ್ಟ ಹೆಸರು ಬರುವಂತಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಯಾಕೆ ಹಿಂದೆ ಮುಂದೆ ನೋಡುತ್ತಿದ್ದಾರೆ? ಇದರಲ್ಲಿ ಸರಕಾರದ ಘಟಾನುಘಟಿಗಳ ಹೆಸರುಗಳೂ ಕೇಳಿಬರುತ್ತಿವೆ. ಎಸ್ಐಟಿಯಿಂದ ಪಾರದರ್ಶಕ ತನಿಖೆ ಮಾಡಲು ಸಾಧ್ಯವಿಲ್ಲ. ಹೆಣ್ಮಕ್ಕಳಿಗೆ ನ್ಯಾಯ ಸಿಗಬೇಕು; ಇದನ್ನು ರಾಜಕೀಯವಾಗಿ ಬಳಸಿಕೊಳ್ಳುವುದನ್ನು ಬಿಟ್ಟು ಸಿಬಿಐ ತನಿಖೆಗೆ ಒಪ್ಪಿಸಿ ಎಂದು ಅವರು ಒತ್ತಾಯಿಸಿದರು.

## ಪ್ರಾಕೃತಿಕ ವಿಕೋಪಗಳನ್ನು ತಡೆಗಟ್ಟಲು ಅಧಿಕಾರಿಗಳು ಸಿದ್ಧರಾಗಿ: ರಾಜೇಂದ್ರನ್

ರಾಮನಗರ: ಮುಂಬರುವ ಮುಂಗಾರಿನಲ್ಲಿ ಸಂಭವಿಸಬಹುದಾದ ವಿವಿಧ ರೀತಿಯ ಪ್ರಾಕೃತಿಕ ವಿಕೋಪಗಳನ್ನು ತಡೆಗಟ್ಟಲು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಮುನ್ನೆಚ್ಚರಿಕಾ ಕ್ರಮವನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅವರು ಮೇ 18ರ ಶನಿವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಪತ್ತು ನಿರ್ವಹಣೆಯ ಕುರಿತು ಆಯೋಜಿಸಲಾಗಿದ್ದ ಪೂರ್ವಭಾವಿ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿರುವ ಕೆರೆಗಳ ಆವರಣವನ್ನು ಸೂಕ್ಷವಾಗಿ ಪರಿಶೀಲಿಸಿ ಸೋರಿಕೆ ಇದ್ದಲ್ಲಿ ಅದನ್ನು ತಡೆಗಟ್ಟಲು ಸಣ್ಣ ನೀರಾವರಿ ಅಧಿಕಾರಿಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು. ಕರೆಗಳಲ್ಲಿರುವ ತ್ಯಾಜ್ಯ, ಕಲ್ಮಶಗಳು, ಮರಗಳ ರೆಂಬೆಕೊಂಬೆಗಳನ್ನು ವಿಲೇವಾರಿ ಮಾಡಬೇಕು ಎಂದರು.



ತಗ್ಗು ಪ್ರದೇಶದಲ್ಲಿರುವ ಮನೆಗಳಿಗೆ ನೀರು ನುಗ್ಗಿ ಸಂಭವಿಸಬಹುದಾದ ಅನಾಹುತಗಳನ್ನು ತಡೆಗಟ್ಟಲು ತಗ್ಗು ಪ್ರದೇಶಗಳಲ್ಲಿ ವಾಸಿಸುತ್ತಿರುವ ಜನರಿಗೆ ಸುರಕ್ಷಿತ ಸ್ಥಳಗಳಿಗೆ ತೆರಳಲು ಮನವರಿಕೆ ಮಾಡಿ, ಅವರು ಸುರಕ್ಷಿತ ಸ್ಥಳಗಳಿಗೆ ತೆರಳಲು ಅನುಕೂಲ ಕಲ್ಪಿಸಿಕೊಡಬೇಕು ಎಂದು ತಿಳಿಸಿದರು. ಚರಂಡಿ, ಚಾಲನ್‌ಗಳಲ್ಲಿರುವ ತ್ಯಾಜ್ಯಗಳನ್ನು ತೆರವುಗೊಳಿಸಿ ಮಳೆನೀರು ಸರಾಗವಾಗಿ ಹರಿದು ಹೋಗಲು ಕ್ರಮವಹಿಸಬೇಕು. ಚರಂಡಿಗಳಲ್ಲಿ ಯಾವುದೇ ದುರಸ್ಥಿ ಇದ್ದಲ್ಲಿ ಅವುಗಳನ್ನು ಸಕಾಲದಲ್ಲಿ ನಿರ್ವಹಿಸಬೇಕು ಎಂದು ತಿಳಿಸಿದರು.

ಮಳೆಯಿಂದಾಗಿ ಸಾಂಕ್ರಾಮಿಕ ರೋಗಗಳು ಹರಡುವ ಸಂಭವವಿದ್ದು, ಸಾಂಕ್ರಾಮಿಕ ರೋಗಗಳು ಹರಡದಂತೆ ಆರೋಗ್ಯ ಇಲಾಖೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳು ಅಗತ್ಯ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು. ಸೊಳ್ಳೆಗಳು ಹೆಚ್ಚಾಗಿರುವ ಪ್ರದೇಶಗಳಿಗೆ ಫಾಗಿಂಗ್ ಮಾಡಿಸುವಂತೆ ಅವರು ತಿಳಿಸಿದರು. ಪ್ರವಾಹದಿಂದಾಗಿ ಜಿಲ್ಲೆಯಲ್ಲಿ ಈ ಹಿಂದೆ ಸಮಸ್ಯೆಗೆ ಸಿಲುಕಿದ್ದ ಸ್ಥಳಗಳನ್ನು ಪರಿಶೀಲಿಸಿ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಮುನ್ನೆಚ್ಚರಿಕೆ ವಹಿಸದಿದ್ದರೆ ಪರಿಸ್ಥಿತಿ ನಿಯಂತ್ರಣ ಅಸಾಧ್ಯ, ಯಾವುದೇ ಸಿದ್ಧತೆ ಮಾಡಿಕೊಳ್ಳದೆ ನಿರ್ಲಕ್ಷ ವಹಿಸದಂತೆ ಅವರು ತಿಳಿಸಿದರು.

ಪ್ರವಾಹ ಉಂಟಾಗುವ ಸ್ಥಳಗಳ ಸಂತ್ರಸ್ಥರಿಗೆ ಸೂಕ್ತ ರಕ್ಷಣೆಗೆ ಕಾಳಜಿ ಕೇಂದ್ರಗಳನ್ನು ತೆರೆಬೇಕಿದ್ದು, ಅಧಿಕಾರಿಗಳು ಸೂಕ್ತ ಸ್ಥಳಗಳನ್ನು ಗುರುತಿಸಿ ಕಾಳಜಿ ಕೇಂದ್ರಗಳನ್ನು ತೆರೆಯುವಂತೆ ತಿಳಿಸಿದರು. ಪ್ರಾಕೃತಿಕ ವಿಕೋಪದ ಕುರಿತು ಮಾಹಿತಿ ಪಡೆಯಲು ಪ್ರತೀ ತಾಲ್ಲೂಕು ಕೇಂದ್ರಗಳಲ್ಲಿ ಕಂಟ್ರೋಲ್ ರೂಂ ಆರಂಭಿಸಬೇಕು.

ಜೀವ ಹಾನಿ ಹಾಗೂ ಬೆಳೆ ಹಾನಿ ಕುರಿತು ಮಾಹಿತಿ ಬಂದಲ್ಲಿ ಸಂಬಂಧಿಸಿದ ತಾಲ್ಲೂಕುಗಳ ತಹಶೀಲ್ದಾರರು ಪರಿಹಾರ ಸೇರಿದಂತೆ ಕೂಡಲೇ ಅಗತ್ಯ ಕ್ರಮವಹಿಸುವಂತೆ ತಿಳಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಅಂಗನವಾಡಿ ಕೇಂದ್ರಗಳು ಹಾಗೂ ಶಾಲೆಗಳಲ್ಲಿ ಮಳೆಯಿಂದಾಗಿ ಸೋರುತ್ತಿದ್ದರೆ, ಅದನ್ನು ದುರಸ್ಥಿಗೊಳಿಸಬೇಕು, ಮಳೆಗಾಲದ ಸಂದರ್ಭದಲ್ಲಿ ಜಿಲ್ಲೆಯ ನಗರ ಹಾಗೂ ಗ್ರಾಮಗಳ ವ್ಯಾಪ್ತಿಯಲ್ಲಿ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು. ತಾತ್ಕಾಲಿಕ ಆರೋಗ್ಯ ಕೇಂದ್ರಗಳನ್ನು ತೆರೆದು, ಆರೋಗ್ಯ ತಪಾಸಣೆ ಮಾಡಬೇಕು ಹಾಗೂ ಔಷಧಗಳ ಅಗತ್ಯ ದಾಸ್ತಾನು ಇರುವ ಬಗ್ಗೆ ಪರಿಶೀಲಿಸಿಕೊಳ್ಳಬೇಕು ಎಂದರು.

ಮಳೆಯಿಂದಾಗಿ ವಿದ್ಯುತ್ ಕಂಬಗಳು ಬೀಳುವ ಸಾಧ್ಯತೆಗಳಿದ್ದರೆ ಬೆಸ್ಕಾಂ ಅಧಿಕಾರಿಗಳು ಶಿಥಿಲಗೊಂಡಿರುವ ವಿದ್ಯುತ್ ಕಂಬಗಳನ್ನು ಕೂಡಲೇ ತೆರವುಗೊಳಿಸಬೇಕು. ವಿಪರೀತ ಮಳೆಯಿಂದಾಗಿ ವಿದ್ಯುತ್ ಅವಘಡಗಳು ಸಂಭವಿಸದಂತೆ ಕ್ರಮವಹಿಸಬೇಕು. ವಿದ್ಯುತ್ ತಂತಿಗಳಿಗೆ ಆವರಿಸಿಕೊಂಡಿರುವ ಅಪಾಯಕಾರಿ ಮರಗಳ ರೆಂಬೆಕೊಂಬೆಗಳನ್ನು ತೆರವುಗೊಳಿಸುವಂತೆ ಅವರು ತಿಳಿಸಿದರು.

ರಾಷ್ಟ್ರೀಯ ಹೆದ್ದಾರಿಯಲ್ಲಿ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಸಂಚಾರಕ್ಕೆ ತೊಂದರೆಯಾಗುತ್ತಿದ್ದ ಪ್ರದೇಶಗಳಲ್ಲಿ ನೀರು ಸಂಗ್ರಹವಾಗದಂತೆ ಎಚ್ಚರಿಕೆ ವಹಿಸಬೇಕು ಹಾಗೂ ಮಳೆಗಾಲದಲ್ಲಿ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗೂ ಲೋಕೋಪಯೋಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪ್ರಾಕೃತಿಕ ವಿಕೋಪಕ್ಕೆ ಸಂಬಂಧಿಸಿದಂತೆ ಪ್ರತಿ ತಾಲ್ಲೂಕು ತಹಶೀಲ್ದಾರರು ತಾಲ್ಲೂಕು ಹಂತದಲ್ಲಿ ಸಭೆಗಳನ್ನು ನಡೆಸಿ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಸೂಕ್ತ ಮಾಹಿತಿ ನೀಡುವಂತೆ ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ, ಉಪವಿಭಾಗಾಧಿಕಾರಿ ಬಿನೋಯ್, ಜಿಲ್ಲೆಯ ಎಲ್ಲಾ ತಹಶೀಲ್ದಾರರು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

MUNJANEVARTHE KANNADA DAILY, EDITOR, PRINTER PUBLISHED And OWNED BY H.L.Amaranth, and Printed at: Sree Manjunatha enterprises, No.30Subbannachan Lane 1st Cross, Cottenpet Bangalore-560053, MOB: 91414 14119 Published at: No.97, 2nd Cross, Vivekananda Nagar, Khadi commision layout, BSK 3rd Stage, Katharaguppe Main Road, Bangalore 560085